ವಿಜಯಪುರ | ಸಂಪುಟ 02 | ಸಂಚಿಕೆ 191 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ರವಿವಾರ, ಸೆಪ್ಟೆಂಬರ್ 22, 2024

" ನಾನು ವಿಜಯಪುರದ ಬಸವ ನಾಡಿನಿಂದ ಬಂದವನು, ಧಾರವಾಡದ ಈ ಪುಣ್ಯಭೂಮಿಯಲ್ಲಿಯೇ ಓದಿ ಸಂಸ್ಕಾರಯುತ ಬದುಕನ್ನು ರೂಪಿಸಿಕೊಂಡವನು, ನಾವು ಊರ ಮುಂದಿನ ತಿಪ್ಪಿಯನ್ನು ನೋಡುವವರಲ್ಲ, ಊರಿನ ಸೌಂದರ್ಯವನ್ನ ಮಾತ್ರ ಗಮನಿಸುವವರು."



- ಸಂಗಮೇಶ ಬಬಲೇಶ್ವರ
ಅಧ್ಯಕ್ಷರು,
ಕರ್ನಾಟಕ ಬಾಲ ವಿಕಾಸ ಅಕಾಡೆಮಿ

## ರಾಹುಲ್ ಗಾಂಧಿ ವಿರುದ್ಧ ಅವಹೇಳನಕಾರಿ ಟೀಕೆಗೆ ಖಂಡನೆ | ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಪತ್ರಿಕಾಗೋಷ್ಠಿ

# ಬಿಜೆಪಿ-ಆರೆಸ್ಸೆಸ್ ವಿರುದ್ಧ ಆಂದೋಲನಕ್ಕೆ ಕಾಂಗ್ರೆಸ್ ಸಜ್ಜು



**ನವದೆಹಲಿ:** ಆರೆಸ್ಸೆಸ್-ಬಿಜೆಪಿಯ ವಿಷಕಾರಿ ಮನಸ್ಥಿತಿಯಿಂದ ತಾವು ಹೆದರುವುದಿಲ್ಲ ಎಂದು ಪ್ರತಿಪಾದಿಸಿದ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿಗೆ ಬೆದರಿಕೆಗಳ ವಿರುದ್ಧ ತಮ್ಮ ಪಕ್ಷವು ಆಂದೋಲನವನ್ನು ಪ್ರಾರಂಭಿಸುತ್ತದೆ ಎಂದು ಹೇಳಿದ್ದಾರೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ಗಾಂಧಿ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ಬಳಸಿದ ಬಿಜೆಪಿ ನಾಯಕರ ವಿರುದ್ಧ ಕ್ರಮ ಕೈಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ವೈಫಲ್ಯವನ್ನು ಪ್ರಶ್ನಿಸಿದ್ದಾರೆ.

ಶಾಸಕರು, ಸಂಸದರು ಸೇರಿದಂತೆ ಬಿಜೆಪಿ, ಆರ್‌ಎಸ್‌ಎಸ್ ನಾಯಕರು ನಮ್ಮ ನಾಯಕರ ನಾಲಿಗೆಯನ್ನು ಕತ್ತರಿಸುವ ಬಗ್ಗೆ ಮಾತನಾಡುತ್ತಾರೆ, ಸತ್ಯವನ್ನು ಮಾತನಾಡಿದ್ದಕ್ಕಾಗಿ ರಾಹುಲ್ ಗಾಂಧಿಯವರ ಮೇಲೆ ದಾಳಿ ನಡೆಯುತ್ತಿದೆ ಮತ್ತು ಅವರ ವಿರುದ್ಧ ದ್ವೇಷದ ವಾತಾವರಣವನ್ನು ಸೃಷ್ಟಿಸಲಾಗಿದೆ (ಅವರ ಅಜ್ಜಿ ಇಂದಿರಾ ಗಾಂಧಿ ವಿರುದ್ಧ ಇದನ್ನು ಮಾಡಲಾಗಿದೆ) ಎಂದು ಜಮ್ಮುವಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

"ಬಿಜೆಪಿ ಮತ್ತು ಆರ್‌ಎಸ್‌ಎಸ್‌ನ ಇಂತಹ ಪ್ರಚೋದನಕಾರಿ ಭಾಷಣಗಳನ್ನು ಪ್ರಧಾನಿ ನಿರ್ಲಕ್ಷಿಸಿದ್ದಾರೆ, ಅವರು ಈ ನಾಯಕರನ್ನು ಹಿಮ್ಮೆಟ್ಟಿಸಲು ಮತ್ತು ಅವರ ವಿರುದ್ಧ ಕ್ರಮ ತೆಗೆದುಕೊಳ್ಳಲು ವಿಫಲರಾಗಿದ್ದಾರೆ ಏಕೆಂದರೆ ಅವರು ಈ ರೀತಿಯ ಹೇಳಿಕೆ ನೀಡುವ ನಾಯಕರಿಗೆ ಭಯಪಡುತ್ತಾರೆ" ಎಂದು ಖರ್ಗೆ ಹೇಳಿದರು.

ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರ ಮಾಡಲು ಜಮ್ಮುವಿಗೆ ಆಗಮಿಸಿದ ಖರ್ಗೆ, ಗಾಂಧಿಯನ್ನು "ಭಯೋತ್ಪಾದಕ" ಮತ್ತು "ದೇಶವಿರೋಧಿ" ಎಂದು ಕರೆಯಲಾಗುತ್ತಿದೆ ಮತ್ತು ಪ್ರಧಾನಿ ಇಂತಹ ಹೇಳಿಕೆಗಳನ್ನು ಪ್ರೋತ್ಸಾಹಿಸುತ್ತಿದ್ದಾರೆ ಮತ್ತು ಕ್ರಮ ಕೈಗೊಳ್ಳದೆ ಜನರನ್ನು ಪ್ರಚೋದಿಸುತ್ತಿದ್ದಾರೆ ಎಂದು ಹೇಳಿದರು.

ಯಾರಾದರೂ ಕಾಂಗ್ರೆಸನ್ನು ಹೆದರಿಸಲು ಹೊರಟರೆ ನಾವು ಹೆದರುವುದಿಲ್ಲ, ನಮ್ಮನ್ನು ಹೆದರಿಸುವವರು ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಮನೆಯಲ್ಲಿ ಕುಳಿತಿದ್ದರು, ನಮ್ಮವರು ಹೋರಾಡಿ ಪ್ರಾಣ ಕೊಟ್ಟರು, ಗಾಂಧಿ ಕುಟುಂಬಕ್ಕೆ ತ್ಯಾಗದ ಇತಿಹಾಸವಿದೆ. ನಿಮ್ಮ ಕೊಡುಗೆ ಏನು ಎಂದು ಜನರಿಗೆ ತಿಳಿಸಿ'' ಎಂದು ಖರ್ಗೆ ಬಿಜೆಪಿ, ಆರ್ ಎಸ್‌ಸ್ ನಾಯಕರಿಗೆ ಖರ್ಗೆ ಸವಾಲು ಹಾಕಿದ್ದಾರೆ.

ಮಹಾತ್ಮ ಗಾಂಧಿ, ಇಂದಿರಾ ಗಾಂಧಿ ಮತ್ತು ರಾಜೀವ್ ಗಾಂಧಿ ಅವರು ದೇಶಕ್ಕಾಗಿ ತಮ್ಮ ಪ್ರಾಣವನ್ನು ಅರ್ಪಿಸಿದ್ದಾರೆ ಮತ್ತು ಅವರು (ಆರ್‌ಎಸ್‌ಎಸ್-ಬಿಜೆಪಿ) ನಮ್ಮ ನಾಯಕರ ನಾಲಿಗೆಯನ್ನು ಕತ್ತರಿಸುವ ಬಗ್ಗೆ ಮಾತನಾಡುತ್ತಿದ್ದಾರೆ, ರಾಹುಲ್ ಅವರನ್ನು ಭಯೋತ್ಪಾದಕ ಮತ್ತು ದೇಶವಿರೋಧಿ ಎಂದು ಬಿಂಬಿಸುತ್ತಿದ್ದಾರೆ, ಇದನ್ನು ನಾವು ಸಹಿಸುವುದಿಲ್ಲ, ಇದರ ವಿರುದ್ಧ ಆಂದೋಲನ ನಡೆಸುತ್ತೇವೆ ಎಂದು ಹೇಳಿದ್ದಾರೆ. ಆರ್ ಎಸ್‌ಸ್ - ಬಿಜೆಪಿಯ ವಿಷಪೂರಿತ ಮನಸ್ಥಿತಿಯನ್ನು ಕಾಂಗ್ರೆಸ್ ಜನತೆಗೆ ತಿಳಿಸಲಿದೆ ಎಂದರು.

## ರಾಹುಲ್ ಗಾಂಧಿ ವಿರುದ್ಧ ಬೆಂಗಳೂರಿನಲ್ಲಿ ಬಿಜೆಪಿ ದೂರು



ಬೆಂಗಳೂರು: ಭಾರತ ದೇಶದಲ್ಲಿ ಮೀಸಲಾತಿ ಬಗ್ಗೆ ಅಮೆರಿಕದಲ್ಲಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ನೀಡಿರುವ ಹೇಳಿಕೆ ವಿಚಾರಕ್ಕೆ ಸಂಬಂಧಿಸಿ ಬೆಂಗಳೂರಿನ ಹೈಗ್ರೌಂಡ್ಸ್ ಠಾಣೆಯಲ್ಲಿ ಬಿಜೆಪಿ ನಾಯಕರು ಶನಿವಾರ ದೂರು ನೀಡಿದ್ದಾರೆ.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್, ರಾಜಕುಮಾರ್ ಪಾಟೀಲ್, ಬಿಜೆಪಿ ಕಾನೂನು ಪ್ರಕೋಷ್ಠದ ಸಂಚಾಲಕ ವಸಂತಕುಮಾರ್ ಸೇರಿ ಬಿಜೆಪಿ ನಾಯಕರು ಹೈಗ್ರೌಂಡ್ಸ್ ಠಾಣೆಗೆ ದೂರು ನೀಡಿದ್ದಾರೆ.

ಇತ್ತೀಚೆಗೆ ಅಮೆರಿಕ ಪ್ರವಾಸ ಕೈಗೊಂಡ ಸಮಯದಲ್ಲಿ ರಾಹುಲ್ ಗಾಂಧಿ ಅವರು, 'ಭಾರತದಲ್ಲಿ ಸಮಾನತೆಯ ಸ್ಥಿತಿ ಮೂಡಿದ ನಂತರ ಮೀಸಲಾತಿ ವ್ಯವಸ್ಥೆಯ ರದ್ದತಿ ಕುರಿತು ಕಾಂಗ್ರೆಸ್ ಪಕ್ಷ ಚಿಂತಿಸಲಿದೆ' ಎಂದು ಹೇಳಿದ್ದರು. ನಂತರದ ಮಾಧ್ಯಮ ಸಂವಾದದಲ್ಲಿ, 'ನಾನು ಮೀಸಲಾತಿಗೆ ವಿರುದ್ಧವಾಗಿ ಇದ್ದೇನೆ ಎಂಬಂತೆ ನನ್ನ ಹೇಳಿಕೆಯನ್ನು ತಪ್ಪಾಗಿ ಬಿಂಬಿಸಲಾಗಿದೆ. ಮೀಸಲಾತಿ ಮಿತಿಯನ್ನು ನಾವು ಶೇ 50 ಮೀರಿ ವಿಸ್ತರಿಸಲಿದ್ದೇವೆ' ಎಂದು ಸ್ಪಷ್ಟಪಡಿಸಿದ್ದರು.

ರಾಹುಲ್ ಗಾಂಧಿಯವರ ಈ ಹೇಳಿಕೆಗೆ ಬಿಜೆಪಿ ವಿರೋಧ ವ್ಯಕ್ತಪಡಿಸಿತ್ತು. ಸಂವಿಧಾನವನ್ನು ಗೌರವಿಸುವ ಯಾರೊಬ್ಬರೂ ರಾಹುಲ್ ಗಾಂಧಿ ಅವರ ನಡೆಯನ್ನು ಒಪ್ಪುವುದಿಲ್ಲ. ಸಾಂವಿಧಾನಿಕ ಹುದ್ದೆಯಲ್ಲಿರುವ ವ್ಯಕ್ತಿಯೊಬ್ಬರ ಇಂತಹ ನಿಲುವು ಅವರ ಸಂವಿಧಾನ ವಿರೋಧಿ ಮನಃಸ್ಥಿತಿ ತೋರಿಸುತ್ತದೆ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಸಹ ರಾಹುಲ್ ಗಾಂಧಿ ಅವರನ್ನು ಟೀಕಿಸಿದ್ದಾರೆ.

ರಾಹುಲ್ ಗಾಂಧಿ ಅವರ ನಾಲಗೆ ಕತ್ತರಿಸುವ ವ್ಯಕ್ತಿಗೆ 11 ಲಕ್ಷ ರೂಪಾಯಿ ನೀಡುವುದಾಗಿ ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ್ ಶಿಂಧೆ ಬಣದ ಶಾಸಕ ಸಂಜಯ್ ಗಾಯಕ್‌ವಾಡ್ ಹೇಳಿದ್ದಾರೆ. ಇನ್ನು ಇತ್ತೀಚೆಗೆ ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ನಡೆಸಲಾಗಿತ್ತು.

## ಸೋಂದಾ ಸ್ವರ್ಣವಲ್ಲೀ ಶ್ರೀಗಳ ಕಾರ್ಯಕ್ರಮ ವಿವರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸೋಂದಾ ಸ್ವರ್ಣವಲ್ಲೀ ಶ್ರೀಗಳಾದ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮಿಗಳು ಶ್ರೀ ಭಗವದ್ಗೀತಾ ಅಭಿಯಾನದ ನಿಮಿತ್ಯ ವಿಜಯಪುರ ನಗರಕ್ಕೆ ಆಗಮಿಸಿದ್ದು ವಿವಿಧ ಸೋಂದಾ ಸ್ವರ್ಣವಲ್ಲೀ ಶ್ರೀಗಳಾದ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮಿಗಳು ಶ್ರೀ ಭಗವದ್ಗೀತಾ ಅಭಿಯಾನದ ನಿಮಿತ್ಯ ವಿಜಯಪುರ ನಗರಕ್ಕೆ ಆಗಮಿಸಿದ್ದು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಸೆ.22, ರವಿವಾರ ಬೆಳಿಗ್ಗೆ 10 ಗಂಟೆಗೆ ಶ್ರೀ ರುಕ್ಮಾಂಗದ ಪಂಡಿತರ ಸಮಾಧಿಯಲ್ಲಿ ನಡೆಯುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರ ಹಾಗೂ ಶಿಕ್ಷಕರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಂತರ ಸಂಜೆ 4 ಗಂಟೆಗೆ ,ಇದೇ ಸ್ಥಳದಲ್ಲಿ ನಡೆಯುವ ವಿಜಯಪುರ ಜಿಲ್ಲೆಯ ಶ್ರೀ ಭಗವದ್ಗೀತಾ ಅಭಿಯಾನ ತಾಲೂಕಾ ಸಮಿತಿಗಳ ಸಭೆಯಲ್ಲಿ ಭಾಗವಹಿಸಿ ಮಾರ್ಗದರ್ಶನ ಮಾಡಲಿದ್ದಾರೆ.

ಸೆ.23, ಸೋಮವಾರ ಸಂಜೆ 4 ಗಂಟೆಗೆ ಜಿಲ್ಲೆ ಸಮಿತಿ, ಕೋರ್ ಕಮಿಟಿ, ಹಾಗೂ ಮಹಿಳಾ ಸಮಿತಿ ಸಭೆಗೆ ಮಾರ್ಗದರ್ಶನ ಮಾಡಲಿದ್ದಾರೆ ಎಂದು ವಿಜಯಪುರ ಜಿಲ್ಲಾ ಭಗವದ್ಗೀತಾ ಅಭಿಯಾನ ಸಮಿತಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸಂಗನಗೌಡ ಪಾಟೀಲ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ತೃತೀಯ ಲಿಂಗದವರು ಸಮಾಜದ ಮುಖ್ಯವಾಹಿನಿಗೆ ಬರಲಿ :ಪ್ರೊ.ಚಂದ್ರಶೇಖರ್



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತೃತೀಯ ಲಿಂಗದವರು ಸಮಾಜದ ಮುಖ್ಯವಾಹಿನಿಗೆ ಬರಲು ಶಿಕ್ಷಣ ಮತ್ತು ಕೌಶಲ್ಯ ಆಧಾರಿತ ತರಬೇತಿಯನ್ನು ಪಡೆದುಕೊಳ್ಳಬೇಕೆಂದು ಮೌಲ್ಯಮಾಪನ ಕುಲಸಚಿವ ಪ್ರೊ.ಎಚ್.ಎಂ.ಚಂದ್ರಶೇಖರ್ ಹೇಳಿದರು.

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾ ಭವನದಲ್ಲಿ ಡಾ.ರೂಪಾ.ಕ.ನಾಯಕೋಡಿ ಅವರ ಐಸಿಎಸ್‌ಎಸ್‌ಆರ್ ಪಿ.ಡಿ.ಎಫ್ ಸಂಶೋಧನೆ ಅಂಗವಾಗಿ ನವಸ್ಫೂರ್ತಿ ಸರಕಾರೇತರ ಸಂಘದ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ 100 ಜನ ತೃತಿಯ ಲಿಂಗದವರ "ಒಂದು ದಿನದ ಕೌಶಲ್ಯ ಆಧಾರಿತ ತರಬೇತಿಯನ್ನು" ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಅತಿಥಿಗಳಾಗಿದ್ದ ನಿಪ್ಪಾಣಿಯ ಕೆ.ಎಲ್.ಇ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಬಿ.ಬಿ. ಪೋಲಿಸಪಾಟೀಲ್ ಅವರು, ಮೂಢನಂಬಿಕೆಗಳಿಂದ ಹೊರಬಂದು ಶಿಕ್ಷಣ ಮತ್ತು ಕೌಶಲ್ಯ ಆಧಾರಿತ ತರಬೇತಿಯನ್ನು ಪಡೆದುಕೊಂಡಾಗ ಮಾತ್ರ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ನವಸ್ಫೂರ್ತಿ ಸರಕಾರೇತರ ಸಂಸ್ಥೆಯ ನಿರ್ದೇಶಕ ಶೆಬ್ಬೀರ ಕಾಗಜಕೊಟಿ, ರುಡಸೆಟ್ ಸಂಸ್ಥೆ ನಿರ್ದೇಶಕ ಮುತ್ತಣ್ಣಾ ಧನಗಾರ, ಪ್ರೊ.ಬಿ.ಎಲ್.ಲಕ್ಕಣ್ಣನವರ, ಪ್ರೊ.ವೆಂಕೋಬಾ ನಾರಾಯಣ್ಣಪ್ಪ, ಪ್ರೊ.ವಿಷ್ಣು ಶಿಂದೆ, ಪ್ರೊ.ಅಶೋಕ ಸುರಪುರ, ಉಪಸ್ಥಿತರಿದ್ದರು.

ಡಾ.ರೂಪಾ ನಾಯ್ಕೋಡಿ ಸ್ವಾಗತಿಸಿದರು. ಸಂಶೋಧನಾ ವಿಧ್ಯಾರ್ಥಿನಿ ಪದ್ಮಾವತಿ ಯತಗಲ ನಿರೂಪಿಸಿದರು ನಿಫೀಸಾ ಸಾಂಗಲಿಕರ ವಂದಿಸಿದರು.

## ಆರೋಗ್ಯಕ್ಕೆ ಪೋಷಕಾಂಶಗಳಿರುವ ಆಹಾರ ಕ್ರಮ ಅಗತ್ಯ: ಜುಂಜರವಾಡ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಪಟ್ಟಣದ ಸಂಗಮೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಎನ್, ಎಸ್, ಎಸ್ ಘಟಕ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಚಡಚಣ ಇವರ ಸಹಯೋಗದೊಂದಿಗೆ ಶ್ರೀ ಸಂಗಮೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಶುಕ್ರವಾರದಂದು ರಾಷ್ಟ್ರೀಯ ಪೋಷಣಾ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಚಡಚಣ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಾಹೇಬಗೌಡ ಜುಂಜರವಾಡ ಮಾತನಾಡಿ, ಪೋಷಕಾಂಶಗಳ ಬಗ್ಗೆ ಹೆಚ್ಚಿನ ಗಮನ ಹರಿಸುವ ಮೂಲಕ ತಮ್ಮ ಆರೋಗ್ಯ ಕಾಪಾಡಿಕೊಳ್ಳ ಬೇಕು ಎಂದರು.

ಮುಖ್ಯ ಅತಿಥಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನೆಯ ಹಿರಿಯ ಮೇಲ್ವಚಾರಕಿ ಶ್ರೀಮತಿ ಎನ್. ಆರ್. ಬಿರಾದಾರ ಅವರು ಮಾತನಾಡಿ, ಆರೋಗ್ಯಕಾರಿ ಹಾಗೂ ಪೋಷಕಾಂಶಗಳಿರುವಂತಹ ಆಹಾರ ಕ್ರಮವು ನಮ್ಮ ಆರೋಗ್ಯಕ್ಕೆ ಅತೀ ಅಗತ್ಯ, ಅದನ್ನು ನಾವು ದಿನನಿತ್ಯ ರೂಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಎಮ್.ವಿ. ಕಟಗೇರಿ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಶ್ರೀ ಸಂಗಮೇಶ್ವರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಎಸ್. ಎಸ್.ಚೋರಗಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಎನ್ . ಎಸ್.ಎಸ್. ಅಧಿಕಾರಿಗಳಾದ ಎಚ್.ಎಸ್. ಮಕಾನದಾರ, ಹಿರಿಯ ಉಪನ್ಯಾಸಕ ಡಾ.ಬಿ.ಎಸ್. ಅಂಡಗಿ. ಶ್ರೀಮತಿ ಎಸ್. ಆರ್. ಟೆಂಗಿನಕಾಯಿ. ಕ್ರೀಡಾ ಹಾಗೂ ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥ ಎಸ್ .ಸಿ. ಕಾಮಗೊಂಡ ಉಪಸ್ಥಿತರಿದ್ದರು.

ಎನ್ . ಎಸ್.ಎಸ್. ವಿದ್ಯಾರ್ಥಿನಿ ಕುಮಾರಿ ಅನಿತಾ ತೊಳನೂರ ಕಾರ್ಯಕ್ರಮ ನಿರ್ವಹಿಸಿದಳು, ಕುಮಾರಿ ಅಕ್ಷತಾ ತೊಳನೂರ ವಂದನಾರ್ಪಣೆ ಮಾಡಿದಳು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಗಳಲ್ಲಿದ್ದ ವಿವಿಧ ತರಕಾರಿ ದವಸಧಾನ್ಯ ಮತ್ತು ಪೋಷಣೆಗೆ ಅವಶ್ಯಕವಾದ ಆಹಾರ ಪದಾರ್ಥಗಳನ್ನು ತಂದು ಶಿಕ್ಷಕರ ಮಾರ್ಗದರ್ಶನದಂತೆ ವಿವಿಧ ವಿನ್ಯಾಸಗಳಲ್ಲಿ ಜೋಡಿಸಿ ಪ್ರದರ್ಶನ ಮಾಡಿದರು.

## ಅಕ್ರಮ ಮದ್ಯ ಮಾರಾಟ ಕಡಿವಾಣಕ್ಕೆ ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲ್ಲೂಕಿನಾದ್ಯಂತ ಅಕ್ರಮ ಮದ್ಯ ಮಾರಾಟ ಭರದಿಂದ ನಡೆಯುತ್ತಿದ್ದು, ಅಪರಾಧ ಎಂದು ತಿಳಿದರೂ ಅಕ್ರಮ ಮದ್ಯ ಮಾರಾಟಗಾರರಿಗೆ ಕಾನೂನಿನ ಭಯವೇ ಇಲ್ಲ. ಇದಕ್ಕೆಲ್ಲ ಕಾರಣ ಅಬಕಾರಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಎಂದು ದೂರಿದ ಕೆ ಆರ್ ಎಸ್ ಪಕ್ಷದ ಕಾರ್ಯಕರ್ತರು ಅಬಕಾರಿ ನಿರೀಕ್ಷಕ ನಾಯಿಕ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಗಣಪತಿ ರಾಠೋಡ ಮಾತನಾಡಿದ ಅವರು, ಅಕ್ರಮ ಮದ್ಯ ಮಾರಾಟ ತಡೆಯುವಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳು ವೈಫಲ್ಯ ಕಂಡಿದ್ದಾರೆ. ಸುಮಾರು 3 ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಅದಕ್ಕಾಗಿ ಅಕ್ರಮ ಮದ್ಯ ಮಾರಾಟಗಾರರಿಗೆ ಕಾನೂನಿನ ಭಯ ಅಥವಾ ಅಧಿಕಾರಿಗಳ ಬಗ್ಗೆ ಕಿಂಚಿತ್ತೂ ಭಯವೇ ಇಲ್ಲ. ತಾಲ್ಲೂಕಿನ ಪ್ರತಿ ಹಳ್ಳಿಯಲ್ಲೂ ಅಕ್ರಮ ಮದ್ಯ ಹೆಚ್ಚಾಗಿ ಜನರ ಜೀವನ ಅಸ್ತವ್ಯಸ್ತತೆ ಕೂಡುತ್ತಿದೆ. ಅದಕ್ಕೆ ನೇರಹೊಣೆ ಅಬಕಾರಿ ಅಧಿಕಾರಿಗಳು ಹೊಣೆ ಹೊರಬೇಕಾಗುತ್ತದೆ. ಈ ಕೂಡಲೇ ಅಕ್ರಮ ಮದ್ಯ ತಡೆಗಟ್ಟಲು ಕಾನೂನು ಕ್ರಮಕೈಗೊಳ್ಳಬೇಕು. ಒಂದು ವೇಳೆ ಅಸಹಾಯಕತನ ತೋರಿದರೆ, ಉಗ್ರವಾದ ಪ್ರತಿಭಟನೆ ಮಾಡುತ್ತೆವೆ.

ಈ ಸಂದರ್ಭದಲ್ಲಿ ಕೆ ಆರ್ ಎಸ್ ಪಕ್ಷದ ಜಿಲ್ಲಾಧ್ಯಕ್ಷ ಅಶೋಕ ಜಾಧವ, ಕಾರ್ಯದರ್ಶಿ ಲಕ್ಷ್ಮಣ್ ಚಡಚಣ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ದುರ್ಗಪ್ಪ ಬೂದಿಹಾಳ, ಚಡಚಣ ತಾಲೂಕು ಅಧ್ಯಕ್ಷ ಚಂದ್ರಕಾಂತ್ ನಗರೇ, ಅಣ್ಣಪ್ಪ ಪೂಜಾರಿ, ಕೆ ಆರ್ ಎಸ್. ಪಕ್ಷದ ಹಲವಾರು ಸೈನಿಕರು ಉಪಸ್ಥಿತರಿದ್ದರು.

## ಸೌಹಾರ್ದ ಸಹಕಾರಿಗಳ ಆರ್ಥಿಕ ತಳಹದಿಯೇ ಸಹಕಾರ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ಸೌಹಾರ್ದ ಸಹಕಾರಿಗಳ ಆರ್ಥಿಕ ಬೆಳವಣಿಗೆಯಲ್ಲಿ ಸಾಲಗಾರರು ಹಾಗೂ ಜಾಮೀನುದಾರರ ಪಾತ್ರ ಬಹಳ ಪ್ರಮುಖವಾಗಿದೆ ಎಂದು ನಿರ್ದೇಶಕ ವೈ ಟಿ ಪಾಟೀಲ ಹೇಳಿದರು

ಪಟ್ಟಣದ ಶ್ರೀ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಲ್ಯಾಣ ಮಂಟಪದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಶ್ರೀ ಹೇಮರೆಡ್ಡಿ ಮಲ್ಲಮ್ಮ ಸೌಹಾರ್ದ ಸಹಕಾರಿ ಸಂಘ ನಿಯಮಿತದ 17 ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಸಕಾಲಕ್ಕೆ ಸಾಲ ಪಡೆಯುವ ಸದಸ್ಯರಿಗೆ, ಜಾಮೀನು ಆಗುವ ಸದಸ್ಯರು ಸಾಲ ಮರುಪಾವತಿ ವಿಷಯದಲ್ಲಿ ಸಾಲಗಾರನಷ್ಟೇ ಜವಾಬ್ದಾರಿಯನ್ನು ಹೊಂದಿರುತ್ತಾನೆ ಎಂದವರು, ಸಾಲ ಬೇಡಿಕೆ ಸಮಯದಲ್ಲಿದ್ದ ಗ್ರಾಹಕರ ಉತ್ಸಾಹ, ಹುಮ್ಮಸ್ಸು, ಸಾಲ ಮರುಪಾವತಿ ಮಾಡುವವರೆಗೂ ಉಳಿಸಿಕೊಂಡಾಗ ಸೌಹಾರ್ದ ಸಹಕಾರಿಗಳು ನಿರೀಕ್ಷಿತ ಗುರಿ ತಲುಪಲು ಸಾಧ್ಯ. ಸಹಕಾರವೇ ಸೌಹಾರ್ದ ಸಹಕಾರಿಗಳ ಆರ್ಥಿಕತೆಗೆ ತಳಹದಿ ಎನ್ನುತ್ತಾ, ಪ್ರಸಕ್ತ ಸಾಲಿನ ಡಿವಿಡೆಂಡ್ 18% ಕೊಡುವುದಾಗಿ ಘೋಷಿಸಿದರು.

ಮುಖ್ಯ ಕಾರ್ಯನಿರ್ವಾಹಕ ಸುರೇಶ ಯಾಳಗಿ 17 ನೇ ವಾರ್ಷಿಕ ಮಹಾಸಭೆಯ ನೋಟೀಸ್ ಓದಿ ಮಂಡಿಸಿದಾಗ ಸರ್ವ ಸದಸ್ಯರು ಚಪ್ಪಾಳೆ ತಟ್ಟುವ ಮೂಲಕ ಒಪ್ಪಿಗೆಯನ್ನು ಸೂಚಿಸಿದರು.

ಸಹಕಾರಿಯ ಅಧ್ಯಕ್ಷ ಶಾಂತಗೌಡ ಎಂ ಬಿರಾದಾರ್ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದರು.

ಉಪಾಧ್ಯಕ್ಷ ಶರಣಬಸವ ವಿ ಡಿಗ್ಗಾವಿ, ನಿರ್ದೇಶಕರಾದ ಸಂಗನಗೌಡ ಹೆಚ್ ಮರಡ್ಡಿ, ರಾಮನಗೌಡ ಎಸ್ ವಂದಗನೂರು, ಸಿದ್ದನಗೌಡ ವಾಯ್ ಕರಡಕಲ್, ಡಾ, ಪ್ರವೀಣ ಭೀ ಪೋಲೀಸ್ ಪಾಟೀಲ್, ಮಲ್ಲರಡ್ಡಿ ಹಚ್ ಹತ್ತಿಕುಣಿ, ಅಯ್ಯನಗೌಡ ಬಿ ಲಕ್ಕುಂಡಿ, ಸಿದ್ದನಗೌಡ ಎಸ್ ಪಾಟೀಲ್, ರವೀಂದ್ರ ಅಮ್ಮಣ್ಣ ಧರಿ, ಹಣಮಂತರಡ್ಡಿ ಆರ್ ಮರಡ್ಡಿ, ರಾಜಶೇಖರ ಪಾಟೀಲ, ಕನಕಪ್ಪ ವಂದಗನೂರು, ವೆಂಕೋಬನಾಯಕ ಜಾಗೀರದಾರ, ಸಿಬ್ಬಂದಿಗಳಾದ ಶ್ಯಾಮಸುಂದರ ವಿ ನಾಡಗೇರ, ಚಂದುಸಿಂಗ್ ಡಿ ರಜಪೂತ್, ಶಿವರೆಡ್ಡಿ ಎಸ್ ಬೋರಡ್ಡಿ, ಅಂಬ್ರೇಶ ಆರ್ ಗುಜ್ಜಲ್, ಚಂದ್ರಶೇಖರ ಫತ್ತೇಪುರ, ಹಾಗೂ ಸರ್ವ ಸದಸ್ಯರುಗಳು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಕಲಚೇತನರ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಸೇವಾನಿರತ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಿಕ್ಷಕರಿಗೆ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಆಕ್ಟೋಬರ್ 15ರಂದು ಕೊನೆಯ ದಿನವಾಗಿದ್ದು,

ವಿಕಲಚೇತನರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿ, ಸಂಸ್ಥೆ ಹಾಗೂ ವಿಶೇಷ ಶಿಕ್ಷಕರು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕನಕದಾಸ ಬಡಾವಣೆ, ಜಿಲ್ಲಾ ಪಂಚಾಯತ ಆವರಣ, ವಿಜಯಪುರ ದೂರವಾಣಿ ಸಂಖ್ಯೆ: 08352-796060 ಅಥವಾ ವೆಬ್ ಸೈಟ್ www.dwdsc.kar.nic.in ಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳಾದ ಶ್ರೀಮತಿ ಸವಿತಾ ಕಾಳೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಹಣಿಗೆ ಆಧಾರ್ ಜೋಡಣೆಯಲ್ಲಿ ಉತ್ತಮ ಸಾಧನೆ:ಗ್ರಾಮ ಆಡಳಿತಾಧಿಕಾರಿಗೆ ಡಿ.ಸಿ. ಪ್ರಶಂಸನಾ ಪತ್ರ



ಕಲಬುರಗಿ: ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಾದ ಪಹಣಿಗೆ ಆಧಾರ್ ಜೋಡಣೆ ಮತ್ತು ಸರ್ಕಾರಿ ಜಮೀನುಗಳ ಸಂರಕ್ಷಣೆಯ ಲ್ಯಾಂಡ್ ಬೀಟ್ ಅಪ್ಲಿಕೇಶನ್ ನಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಜಿಲ್ಲೆಯ ಕಮಲಾಪುರ ತಾಲೂಕಿನ ಮಹಾಗಾಂವ ಮತ್ತು ಕುರಿಕೋಟಾ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಜೈಪ್ರಕಾಶ್ ಮತ್ತು ಚಿಂಚೋಳಿ ತಾಲೂಕಿನ ಚಿಮ್ಮಾಇದ್ಲಾಯಿ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಸುಮಾ ಅವರಿಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಅಭಿನಂದನಾ ಪತ್ರ ನೀಡಿ ಪ್ರಶಂಸೆ ವ್ಯಕ್ತಪಡಿಸಿದರು. ಶುಕ್ರವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉತ್ತಮ ಕಾರ್ಯನಿರ್ವಹಿಸಿದ ಇಬ್ಬರಿಗೂ ಅಭಿನಂದನಾ ಪತ್ರ ನೀಡಿ ಮುಂದೆಯೂ ಇಲಾಖೆಯ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪುವ ರೀತಿಯ ಕಾರ್ಯನಿರ್ವಹಿಸುವಂತೆ ಹೇಳಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತರಾದ ಸಾಹಿತ್ಯ, ಪ್ರಭುರೆಡ್ಡಿ, ಪ್ರೊಬೇಷನರ್ ಐ.ಎ.ಎಸ್. ಅಧಿಕಾರಿ ಮೀನಾಕ್ಷಿ ಆರ್ಯ ಸೇರಿದಂತೆ ತಾಲೂಕಿನ ತಹಶೀಲ್ದಾರರು ಇದ್ದರು.

# ನಿವಾಸಿ ಮಕ್ಕಳೊಂದಿಗೆ ಹುಟ್ಟು ಹಬ್ಬ ಆಚರಿಸಿಕೊಂಡ ಡಿ.ಸಿ. ಬಿ.ಫೌಜಿಯಾ ತರನ್ನುಮ್



ಕಲಬುರಗಿ: ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಗುರುವಾರ ಸಂಜೆ ತಮ್ಮ ಹುಟ್ಟು ಹಬ್ಬವನ್ನು ಕಲಬುರಗಿ ನಗರದ ಆಳಂದ ನಾಕಾ ರಸ್ತೆಯಲ್ಲಿರುವ ರಾಜ್ಯ ಮಹಿಳಾ ನಿಲಯದ ನಿವಾಸಿಗಳು, ಬಾಲಕಿಯರ ಬಾಲ ಮಂದಿರ ಹಾಗೂ ಬುದ್ಧಿಮಾಂದ್ಯ ಬಾಲಕಿಯರ ಬಾಲ ಮಂದಿರದ ಮಕ್ಕಳೊಂದಿಗೆ ಆಚರಿಸಿಕೊಂಡರು.

ಮಕ್ಕಳೊಂದಿಗೆ ಕೇಕ್ ಕತ್ತರಿಸಿ ಅದನ್ನು ಎಲ್ಲಾ ಮಕ್ಕಳಿಗೆ ವಿತರಿಸಿದರು. ತಮ್ಮ ಹುಟ್ಟು ಹಬ್ಬ ಆಚರಿಸಿಕೊಳ್ಳುವುದಕ್ಕೆ ಜಿಲ್ಲೆಯ ದಂಡಾಧಿಕಾರಿಗಳೆ ತಮ್ಮ ನಿಲಯಕ್ಕೆ ಬಂದಿರುವುದನ್ನು ಕಂಡ ಮಕ್ಕಳು ಮತ್ತು ನಿವಾಸಿಯಲ್ಲಿ ಎಲ್ಲಿಲ್ಲದ ಸಂಭ್ರಮ ಮನೆ ಮಾಡಿತ್ತು. ಮಕ್ಕಳು ಹೆಜ್ಜೆ ಹಾಕಿ ಸಂಭ್ರಮಪಟ್ಟಿದಲ್ಲದೆ ಡಿ.ಸಿ. ಜೊತೆ ಗ್ರೂಪ್ ಫೋಟೊ ತೆಗೆಸಿಕೊಂಡರು. ಇದೇ ಸಂದರ್ಭದಲ್ಲಿ ನಿಲಯದ ನಿವಾಸಿಯೊಬ್ಬರು ತಾವು ಬಿಡಿಸಿದ ಕೃಷ್ಣನ ಚಿತ್ರವನ್ನು ಜಿಲ್ಲಾಧಿಕಾರಿಗಳಿಗೆ ಹುಟ್ಟು ಹಬ್ಬದ ಉಡುಗೊರೆಯಾಗಿ ನೀಡಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಥೋಡ್, ಮಹಿಳಾ ಅಭಿವೃದ್ಧಿ ಅಧಿಕಾರಿ ಶರಣಪ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ಪಾಟೀಲ್, ಬುದ್ಧಿಮಾಂದ್ಯ ಬಾಲಕಿಯರ ಬಾಲ ಮಂದಿರ ಶಾಲೆಯ ಅಧೀಕ್ಷಕಿ ಜ್ಯೋತಿ ಬೊಮ್ಮನಗಿ, ಬಾಲಕಿಯರ ಬಾಲ ಮಂದಿರದ ಅಧೀಕ್ಷಕಿ ಶಾಂತಾಬಾಯಿ, ರಾಜ್ಯ ಮಹಿಳಾ ನಿಲಯದ ಅಧೀಕ್ಷಕಿ ಅನುರಾಧ ಪಾಟೀಲ ಸೇರಿದಂತೆ ಇತರೆ ಸಿಬ್ಬಂದಿಗಳು ಇದ್ದರು.

# ಶಿಕ್ಷಕರ ಆಶೀರ್ವಾದವಿಲ್ಲದೆ ಸಾಧಿಸಲು ಸಾಧ್ಯವಿಲ್ಲ ವಿದ್ಯಾರ್ಥಿಗಳಿಗೆ ಸಲಹೆ



ಕಲಬುರಗಿ: ಶಿಕ್ಷಕರ ಸಾಮರ್ಥ್ಯದ ಬಗ್ಗೆ ಟೀಕೆ ಮಾಡಬೇಡಿ, ಶಿಕ್ಷಕರ ಆಶೀರ್ವಾದವಿಲ್ಲದೆ ನೀವು ಜೀವನದಲ್ಲಿ ಏನನ್ನೂ ಸಾಧಿಸಲು ಸಾಧ್ಯವಿಲ್ಲ ಎಂದು ಕರ್ನಾಟಕ ಸರ್ವೋಚ್ಛ ನ್ಯಾಯಾಲಯದ ನ್ಯಾಯಮೂರ್ತಿ ರಾಮಚಂದ್ರ ಡಿ. ಹುದ್ದಾರ್ ಅವರು ಹೇಳಿದರು.

ಜಿಲ್ಲೆಯ ಅಳಂದ್ ತಾಲ್ಲೂಕಿನ ಕಡಗಂಚಿ ಬಳಿ ಇರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ಹೊಸದಾಗಿ ಪ್ರವೇಶ ಪಡೆದ ಪಿಜಿ ವಿದ್ಯಾರ್ಥಿಗಳ ಓರಿಯಂಟೇಶನ್ ಕಾರ್ಯಕ್ರಮದ ಉದ್ಘಾಟನಾ ಅಧಿವೇಶನದಲ್ಲಿ ಮಾತನಾಡಿದ ಅವರು, ಶಿಕ್ಷಕರು ತರಗತಿಯಲ್ಲಿ ಕಲಿಸಲು ತುಂಬಾ ಶ್ರಮಿಸುತ್ತಾರೆ. ಅವರು ತರಗತಿಯ ತಯ್ಯಾರಿಗಾಗಿ ಸಾಕಷ್ಟು ಸಮಯವನ್ನು ಕಳೆಯುತ್ತಾರೆ. ಶಿಕ್ಷಕರನ್ನು ಗೌರವಿಸಿ, ಸಮಯಪಾಲನೆ ಮಾಡಿ ಮತ್ತು ತರಗತಿಯಲ್ಲಿ ಗಮನ ಕೊಟ್ಟು ಪಾಠ ಕೇಳಿ ಎಂದರು.

ವಿಶ್ವವಿದ್ಯಾಲಯ ಕ್ಯಾಂಪಟನಲ್ಲಿ ನಿಮ್ಮ ವಾಸ್ತವ್ಯವನ್ನು ಸರಿಯಾಗಿ ಬಳಸಿಕೊಳ್ಳಿ ಮತ್ತು ಇನ್ನಷ್ಟು ತಿಳಿದುಕೊಳ್ಳಿ. ಮೊಬೈಲ್ ಫೋನ್ ವ್ಯಸನಿಯಾಗಬೇಡಿ, ಯಾವಾಗಲೂ ಕಷ್ಟಪಟ್ಟು ಕೆಲಸ ಮಾಡಿ. ವಿದ್ಯಾರ್ಥಿಗಳು ಯಾವಾಗಲು ಜ್ಞಾನವನ್ನು ಅರಸಿಕೊಂಡು ಹೋಗಬೇಕು ಮತ್ತು ಉತ್ತಮ ಅಂಕ ಗಳಿಸಬೇಕು. ಅಂಕಗಳು ನಿಮ್ಮ ಜ್ಞಾನದ ಸೂಚ್ಯಂಕವಾಗಿವೆ. ದೇಶದ ಭವಿಷ್ಯ ವಿದ್ಯಾರ್ಥಿಗಳ ಕೈಯಲ್ಲಿದೆ. ಇಂದಿನ ಜ್ಞಾನ ಆಧಾರಿತ ಆರ್ಥಿಕತೆಯಲ್ಲಿ ರಾಷ್ಟ್ರಕ್ಕೆ ಆಸ್ತಿಯಾಗಿ. ಕಾನೂನು ವಿಷಯ ಸೇರಿದಂತೆ ಎಲ್ಲಾ ವಿಭಾಗಗಳಿಗೆ ವಿಫುಲ ಅವಕಾಶಗಳಿವೆ, ಅವುಗಳನ್ನು ಪಡೆದುಕೊಳ್ಳಲು ನೀವು ಸಮರ್ಥರಾಗಿರಬೇಕು. ಅದಕ್ಕಾಗಿ ನೀವು ಕಷ್ಟಪಟ್ಟು ಬಹಳಷ್ಟು ಓದಬೇಕು ಎಂದು ಅವರು ಹೇಳಿದರು. ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಜೀವನದ ಎಲ್ಲ ಯಶಸ್ಸಿಗೆ ಶಿಕ್ಷಣವೇ ಆಧಾರ. ಜೀವನದಲ್ಲಿ ಮೇಲಕ್ಕೆ ಬರಲು ವಿಶ್ವವಿದ್ಯಾಲಯದ ಸಂಪನ್ಮೂಲ ಮತ್ತು ಸೌಲಭ್ಯಗಳನ್ನು ಸರಿಯಾಗಿ ಬಳಸಿಕೊಳ್ಳಿ. ಭೌತಿಕ ಸಂಪತ್ತು ಶಾಶ್ವತವಲ್ಲ, ಜ್ಞಾನವೇ ನಿಜವಾದ ಸಂಪತ್ತು. ಜ್ಞಾನ ಮತ್ತು ಸುಸಂಸ್ಕೃತ ವ್ಯಕ್ತಿತ್ವದೊಂದಿಗೆ ನಿಮ್ಮ ಜೀವನನ್ನು ನಿರ್ಮಿಸಿ. ಸಮಾಜದಲ್ಲಿ ಒಳ್ಳೆಯವರ ಕೊರತೆಯಿದೆ, ರಾಷ್ಟ್ರದ ಉತ್ತಮ ಪ್ರಜೆಯಾಗಿರಿ ಎಂದರು.

ಕುಲಸಚಿವ ಪ್ರೊ ಆರ್.ಆರ್. ಬಿರಾದಾರ್ ಅವರು ಮಾತನಾಡಿ, ಕಠಿಣ ಪರಿಶ್ರಮ, ಆತ್ಮವಿಶ್ವಾಸ, ಪ್ರಾಮಾಣಿಕತೆ, ಸಕಾರಾತ್ಮಕ ಚಿಂತನೆ, ಇತರರೊಂದಿಗೆ ಹೋಲಿಕೆ ಮಾಡದಿರುವುದು, ಭಾವನಾತ್ಮಕ ಸ್ಥಿರತೆ, ಸ್ವಯಂ ನಿಯಂತ್ರಣ ಮತ್ತು ಸ್ವಯಂ ಶಿಸ್ತು ವಿದ್ಯಾರ್ಥಿಗಳ ಜೀವನದ ಸುವರ್ಣ ನಿಯಮಗಳು, ಅವುಗಳನ್ನು ಅನುಸರಿಸಿ ಮತ್ತು ಯೋಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ ಎಂದರು.ಈ ಸಂದರ್ಭದಲ್ಲಿ ಪ್ರೊಕ್ಟರ್ ಡಾ. ವೆಂಕಟರಮಣ ದೊಡ್ಡಿ, ಪರೀಕ್ಷಾ ನಿಯಂತ್ರಕ ಕೋಟ ಸಾಯಿಕೃಷ್ಣ, ಗ್ರಂಥ-ಪಾಲಕ ಡಾ. ಪಿ.ಎಸ್. ಕಟ್ಟಿಮನಿ, ಆಂತ-ರಿಕ ದೂರು ಸಮಿತಿ ಅಧ್ಯಕ್ಷೆ ಪ್ರೊ ಸುನೀತಾ ಮಂಜನಬೈಲ್, ಸಂಶೋಧನಾ ಮತ್ತು ಅಭಿವೃದ್ಧಿ ಕೋಶ ಹಾಗೂ ನೋಡಲ್ ಅಧಿಕಾರಿ ಕುಂದುಕೊರತೆ ಕೋಶ ಪ್ರೊ ಸತ್ಯನಾರಾಯಣ, ಮುಖ್ಯ ವಾರ್ಡನ್ ಡಾ.ಬಸವರಾಜ್ ಎಂ.ಎಸ್. ಸಾಂಸ್ಕೃತಿ-ಕ ಸಂಯೋಜಕ ಡಾ. ಮಲ್ಲಿಕಾರ್ಜುನ್ ಎಸ್. ಹೂಗಾರ್ ಅವರು ತಮ್ಮ ಇಲಾಖೆಗಳು ಮತ್ತು ಕೋಶಗಳು ಒದಗಿಸುವ ಸೌಲಭ್ಯಗಳು ಮತ್ತು ಸೇವೆಗಳ ಕುರಿತು ಮಾತನಾಡಿದರು.

ಡೀನ್ ವಿದ್ಯಾರ್ಥಿಗಳ ಕಲ್ಯಾಣಾಧಿಕಾರಿ ಡಾ. ಬಸವರಾಜ್ ಕುಬಕಡ್ಡಿ ಅವರು ಸ್ವಾಗತಿಸಿ, ವಂದಿಸಿದರು. ಈ ಸಂದರ್ಭದಲ್ಲಿ ವಿಜ್ಞಾನೇಶ್ವರ ಪ್ರತಿಷಾನದ ಕಾರ್ಯದರ್ಶಿ ಮಹದೇವಯ್ಯ ಕರದಳ್ಳಿ, ಡೀಯರು, ಮುಖ್ಯಸ್ಥರು, ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಿಬಿಎಸ್‌ಇ ಕ್ಲಸ್ಟರ್ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿ



ಕಲಬುರಗಿ: ನಗರದಲ್ಲಿನ ಸ್ವಾಮಿ ನಾರಾಯಣ ಇಂಟರ್ ನ್ಯಾಶನಲ್ ಸ್ಕೂಲ್‌ನಲ್ಲಿ ಸಿಬಿಎಸ್‌ಇ ಕ್ಲಸ್ಟರ್ ರಾಜ್ಯ ಮಟ್ಟದ ವಾಲಿಬಾಲ್ ಪಂದ್ಯಾವಳಿಗಳು ಸೆಪ್ಟೆಂಬರ್ 22ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಪ್ರಿನ್ಸಿಪಾಲ್ ಇ.ಜಿ. ದೀಕ್ಷಿತ್ ಅವರು ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲೆಯು 19 ವರ್ಷದೊಳಗಿನ, 17 ವರ್ಷದೊಳಗಿನ ಮತ್ತು 14 ವರ್ಷದೊಳಗಿನ ತಂಡಗಳಿಗೆ ಸಿಬಿಎಸ್‌ಇ ಕ್ಲಸ್ಟರ್ ರಾಜ್ಯ ಮಟ್ಟದ ವಾಲಿಬಾಲ್ ಸ್ಪರ್ಧೆಯನ್ನು ಆಯೋಜಿಸುತ್ತಿದೆ ಎಂದರು. ರಾಜ್ಯಾದ್ಯಂತ ವಿವಿಧ ಶಾಲೆಗಳಿಂದ 6000ಕ್ಕೂ ಹೆಚ್ಚು ಪ್ರತಿಭಾವಂತ ಕ್ರೀಡಾಪುಟಗಳು ಪಂದ್ಯಾವಳಿಯಲ್ಲಿ ಪಾಲ್ಗೊಳ್ಳುವರು. ಸ್ಪರ್ಧೆಯು ಯುವ ಕ್ರೀಡಾಪಟುಗಳಲ್ಲಿ ಕ್ರೀಡಾ ಮನೋಭಾವ, ತಂಡದ ಕೆಲಸ ಮತ್ತು ಆರೋಗ್ಯಕರ ಸ್ಪರ್ಧೆಯ ಮನೋಭಾವವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಭಾಗವಹಿಸುವ ತಂಡಗಳು ಪಂದ್ಯಗಳ ಸರಣಿಯಲ್ಲಿ ಸ್ಪರ್ಧಿಸುತ್ತವೆ.

# ಜಾನಪದ ಸಂಸ್ಕೃತಿಯ ರಕ್ಷಣೆ ಎಲ್ಲರ ಜವಾಬ್ದಾರಿ



ಕಲಬುರಗಿ: ಶಿಷ್ಟ ಸಾಹಿತ್ಯಕ್ಕೆ ತಾಯಿಬೇರು, ಭಾರತದ ಭವ್ಯ ಪರಂಪರೆಯನ್ನು ಸಾರುವ ಜನಪದ ಸಂಸ್ಕೃತಿ ಭಾರತೀಯರ ಜೀವಾಳ. ಆಧುನಿಕರಣಕ್ಕೆ ಒಳಗಾಗಿ ನಮ್ಮತನವನ್ನು ಮರೆಯದೆ, ದೇಶದ ಮೂಲ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆಯಾದ ಜಾನಪದ ಸಂಸ್ಕೃತಿಯನ್ನು ರಕ್ಷಿಸುವುದು ಎಲ್ಲರ ಜವಾಬ್ದಾರಿ. ಪ್ರತಿಯೊಬ್ಬರು ಸಂಸ್ಕೃತಿ, ಪರಂಪರೆಯನ್ನು ಅಳವಡಿಸಿಕೊಂಡು ಮುಂದಿನ ಜನಾಂಗಕ್ಕೆ ವರ್ಗಾಯಿಸಿಬೇಕು ಎಂದು ಸಾಹಿತಿ ಹಾಗೂ ಕಜಾಪ ಜಿಲ್ಲಾಧ್ಯಕ್ಷ ಎಂ.ಬಿ.ನಿಂಗಪ್ಪ ಹೇಳಿದರು. ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ ಮೌಲಾನಾ ಆಜಾದ ಮಾದರಿ ಶಾಲೆಯಲ್ಲಿ 'ಕನ್ನಡ ಜಾನಪದ ಪರಿಷತ್'ನ ತಾಲೂಕಾ ಘಟಕದ ವತಿಯಿಂದ ಶುಕ್ರವಾರ ಏರ್ಪಡಿಸಲಾಗಿದ್ದ 'ವಿಶ್ವ ಜಾನಪದ ದಿನಾಚರಣೆ'ಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.ಕನ್ನಡ ಜಾನಪದ ಪರಿಷತ್‌ನ ತಾಲೂಕಾ ಘಟಕದ ಅಧ್ಯಕ್ಷ ದೇವೇಂದ್ರ ಗುಡೂರ್ ಮಾತನಾಡಿ, ಜಾನಪದ ಸಾಹಿತ್ಯ ತುಂಬಾ ಗಟ್ಟಿಯಾದದ್ದು. ಅದರಲ್ಲಿ ಮಾನವೀಯ ಮೌಲ್ಯಗಳಿವೆ. ಸುಂದರ ಬದುಕಿಗೆ ಬೇಕಾದ ಶಾಂತಿ, ಶಿಸ್ತು, ಪ್ರೀತಿ, ಪ್ರೇಮ, ಗುರು-ಹಿರಿಯರಿಗೆ ಗೌರವ ನೀಡುವ ಸಂಸ್ಕೃತಿ, ವೈಜ್ಞಾನಿಕ ದೃಷ್ಠಿಕೋನ, ನೈತಿಕ ಮೌಲ್ಯಗಳು ಅಡಗಿವೆ. ಜಾನಪದ ಕಲಾವಿದರಿಗೆ ಪ್ರೋತ್ಸಾಹ ನೀಡಿ ಬೆಳೆಸಬೇಕು.

# ಸೆ. 22ರಂದು ಕಾಂಗ್ರೆಸ್ ಸತ್ಯ ಶೋಧನಾ ಸಮಿತಿ ಸಭೆ



ಕಲಬುರಗಿ: ಕೆಪಿಸಿಸಿ ಸತ್ಯ ಶೋಧನಾ ಸಮಿತಿ ವಿಭಾಗದ ಅಧ್ಯಕ್ಷ ಸಲೀಂ ಅಹ್ಮದ್ ಹಾಗೂ ಈ ಸಮಿತಿಯ ಸದಸ್ಯರುಗಳು ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಸೆಪ್ಟೆಂಬರ್ 22ರಂದು ಸಂಜೆ 4 ಗಂಟೆಗೆ ಆಗಮಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇ-ರಿಯಲ್ಲಿ ಸಭೆಯನ್ನು ನಡೆಸಲಿದ್ದಾರೆ ಎಂದು ಪಕ್ಷದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಕಾಳಗಿ ಅವರು ತಿಳಿಸಿದ್ದಾರೆ.

ಸಭೆಗೆ ಕಾಂಗ್ರೆಸ್ ಪಕ್ಷದ ಹಾಲಿ ಹಾಗೂ ಮಾಜಿ ಸಂಸದರು, ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಎಐಸಿಸಿ, ಕೆಪಿಸಿಸಿ ಪದಾಧಿಕಾ-ರಿಗಳು ಹಾಗೂ ಸದಸ್ಯರು, ಜಿಲ್ಲಾ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷರು, ಡಿಸಿಸಿ ಡೇಲಿಗೇಟ್ ಸದಸ್ಯರು, ಜಿಲ್ಲಾ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ವಿವಿಧ ಮುಂಚೂಣಿ ಘಟಕ, ವಿಭಾಗಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಕಾಂಗ್ರೆಸ್ ಪಕ್ಷದ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಎಪಿಎಂಸಿಯ ಹಾಲಿ ಹಾಗೂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮಹಾಪೌರರು, ಉಪ ಮಹಾಪೌರರು ಹಾಗೂ ಹಾಲಿ ಮತ್ತು ಮಾಜಿ ಸದಸ್ಯರುಗಳು, ಮಹಿಳೆಯರು, ಯುವಕರು ಕಾಂಗ್ರೆಸ್ ಪಕ್ಷದ ಎಲ್ಲ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಅವರು ಕೋರಿದ್ದಾರೆ.

# ಕಾರ್ಮಿಕರಿಗೆ ಕಾಯ್ದೆಗಳು, ಕಾನೂನುಗಳು ತುಂಬಾ ಅವಶ್ಯಕ: ನ್ಯಾಯಾಧೀಶ ಶ್ರೀನಿವಾಸ ನವಲೆ

ಕಲಬುರಗಿ: ಕಾರ್ಮಿಕರಿಗೆ ಕಾಯ್ದೆಗಳು ಕಾನೂನುಗಳು ತುಂಬಾ ಅವಶ್ಯಕವಾಗಿದೆ. ಭಾರತ ದೇಶವು 2047 ರಲ್ಲಿ 500 ಲಕ್ಷ ಕೋಟಿ ಆರ್ಥಿಕ ಶಕ್ತಿಯಾಗುತ್ತದೆ ಎಂದು ಒಂದು ವರದಿ ಹೇಳಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಶ್ರೀನಿವಾಸ ನವಲೆ ಅವರು ಹೇಳಿದರು.

ಶುಕ್ರವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಕಾರ್ಮಿಕ ಇಲಾಖೆ ಕಲಬುರಗಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕಾರ್ಮಿಕ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಮಿಕ ಕಾಯ್ದೆಗಳು ಹಾಗೂ ಯೋಜನೆಗಳು ಮತ್ತು ಬಡತನ ನಿರ್ಮೂಲನೆ ಪರಿಣಾಮಕಾರಿ ಅನುಷ್ಠಾನದ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಭಾರತ ಅಭಿವೃದ್ಧಿಯಾಗಬೇಕಾದರೆ.ಇಂತಹ ಒಂದು ಕೈಗಾರಿಕೆ ಕಾನೂನುಗಳು ಕಾಯ್ದೆಗಳು ಅವಶ್ಯಕವಾಗಿದೆ.ಕೈಗಾರಿಕೆ ಕಾನೂನುಗಳನ್ನು ಮಾಡಿ ಅದು ಅನುಷ್ಠಾನಕ್ಕೆ ತರದೆ ಅದು ಕೇವಲ ಕಾಗದದಲ್ಲಿ ಇದ್ದಾರೆ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು. ಹೊಸ ಹೊಸ ಕಾನೂನುಗಳು ಯೋಜನೆಗಳು ತಿಳಿದುಕೊಂಡರೆ ದೇಶದ ನಿರ್ಮಾಣ ಕಾರ್ಯದಲ್ಲಿ ನಾವು ನಮ್ಮ ಕೊಡುಗೆಯನ್ನ ನೀಡಬಹುದಾಗಿದೆ. ಬದಲಾದ ಕಾಲದಲ್ಲಿ ಹೊಸ ಹೊಸ ಕಾನೂನು ಕಾಯ್ದೆಗಳು ಬಂದಿವೆ ಅವನ್ನ ತಿಳಿದುಕೊಳ್ಳದೆ ಇದ್ದಾರೆ ನಾವು ಹಿಂದೆ ಉಳಿಯುತ್ತವೆ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ ಎಂದರು., ಶಿಕ್ಷಣದಿಂದ ಅಭಿವೃದ್ಧಿ ಸಾಧ್ಯವಾಗುತ್ತದೆ ಹಾಗಾಗಿ ಪೋಷಕರಿಗೆ ತಮ್ಮ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸುವಂತೆ ಅವ-ರಿಗೆ ಮನವರಿಕೆ ಮಾಡಬೇಕು ಅಂದ್ದಾಗ ಮಾತ್ರ ಬಾಲಕಾರ್ಮಿಕತೆ ತಡೆಯಲು ಸಾಧ್ಯವಾಗುತ್ತದೆ. ಬಾಲ ಕಾರ್ಮಿಕರಾಗಲು ಮುಖ್ಯ ಕಾರಣ ಬಡತನವಾಗಿದೆ ಬಡತನವನ್ನುನಿರ್ಮೂಲನೆಮಾಡುವಂತಹ ನಿಟ್ಟನಲ್ಲಿ ನಾವು ಯೋಜನೆಗಳು ಕಾರ್ಯಗಳನ್ನು ಮಾಡಬೇಕಾಗುತ್ತದೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಕಲಬುರಗಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಮೊಹೊಮ್ಮದ್ ಬಷೀರ್ ಅನ್ಸಾರಿ ಮಾತನಾಡಿ, ಈ ಹಿಂದೆ ಇದ್ದಂತಹ ಕಾನೂನುಗಳನ್ನೆ ನವೀಕರಣ ಮಾಡುಲಾಗುತ್ತಿದೆ. ಕಾರ್ಮಿಕ ವರ್ಗದವರು ಯಾವುದೇ ಸೌಲಭ್ಯವನ್ನು ಪಡೆಯುವುದಕ್ಕಾಗಿ ಅವರಿಗೆ ಕಾನೂನು ಮಾಹಿತಿ ಪಡೆಯಬೇಕಾದದ್ದು ಅವಶ್ಯಕವಾಗಿದೆ.ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಎನ್ ಸಿ ಎಲ್ ಅಧ್ಯಕ್ಷ ಶಂಕರ ಕಟ್ಟಿಸಂಗಾವಿ ಮಾತನಾಡಿ ಹಲವು ಕಾರ್ಮಿಕ ವರ್ಗದ ಧ್ವನಿಯಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮಾಹಿತಿ ಕೊರತೆಯಿಂದ ಹಲವು ಕಾರ್ಮಿಕ ವರ್ಗದವರು ಸೌಲಭ್ಯ ವಂಚಿತರಾಗುತ್ತಾರೆ ಇವತ್ತಿನ ಕಾರ್ಯಕ್ರಮವು ಮಾಹಿತಿ ನೀಡುವಂತಹ ಒಂದು ಮಹಾಶಕ್ತಿಯಾಗಿದೆ.ಕಾರ್ಮಿಕರಿಗೆ ಎಲ್ಲಾ ಸೌಲಭ್ಯವನ್ನು ಪಡೆಯಲು ಕಾರ್ಮಿಕ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ನಾವೆಲ್ಲರು ಒಗ್ಗಟಿನಿಂದ ಕೆಲಸ ಮಾಡಿದಲ್ಲಿ ಇದು ಸಾಧ್ಯವಾಗುತ್ತದೆ.

# ಒಂದು ದೇಶ, ಒಂದು ಚುನಾವಣೆ ವಿರೋಧಿಸಿ ರಾಜ್ಯವ್ಯಾಪಿ ಸೆ. 26ರಂದು ಜಿಲೆಗಳಲ್ಲಿ ಧರಣಿ

ಕಲಬುರಗಿ:ಒಂದು ದೇಶ ಒಂದು ಚುನಾವಣೆಯನ್ನು ವಿರೋಧಿಸಿ ರಾಜ್ಯವ್ಯಾಪಿ ಸೆಪ್ಟೆಂಬರ್ 26ರಂದು ರಾಜ್ಯವ್ಯಾಪಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಡಾ. ಡಿ.ಜಿ. ಸಾಗರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ದೇಶ ಒಂದು ಚುನಾವಣೆ ವಿಷಯ ಚರ್ಚಿಸದೇ ಏಕಾಏಕಿ ಜಾರಿ ಮಾಡಲು ಹೊರಟಿರುವ ಕೇಂದ್ರದ ಬಿಜೆಪಿ ಸರ್ಕಾರದ ನಡೆ ಖಂಡನಾರ್ಹ. ಇದನ್ನು ವಿರೋಧಿಸಿ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಧರಣಿ ಹಮ್ಮಿಕೊಂಡಿದ್ದು, ಪ್ರಗತಿಪರರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕೋರಿದರು.

ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಮೀಸಲಾತಿ ವಿರೋಧಿ ಎಂಬಂತೆ ಬಿಂಬಿಸುತ್ತಿರುವ ಬಿಜೆಪಿ, ಜೆಡಿ-ಎಸ್ ನಡೆಯನ್ನು ಖಂಡಿಸಿ ಒಂದು ದೇಶ ಒಂದು ಚುನಾವಣೆಯನ್ನು ಕೇಂದ್ರ ಸರ್ಕಾರದ ಅಜೆಂಡಾದ ಭಾಗ. ಕೇಂದ್ರ ಸಚಿವ ಸಂಪುಟ ಒಪ್ಪಿಗೆ ನೀಡಿರುವ ಒಂದು ದೇಶ, ಒಂದು ಚುನಾವಣೆ ಪ್ರಸ್ತಾವ ಒಕ್ಕೂಟ ವ್ಯವಸ್ಥೆಗೆ ವಿರೋಧವಾಗಿದೆ. ಅದನ್ನು ಅನುಷ್ಠಾನ ಮಾಡುವುದಕ್ಕೆ ಸಾಧ್ಯವಾಗದೇ ಹೋಗಬಹುದು. ಇಂತಹುದೊಂದು ಮಹತ್ವದ ಪ್ರಸ್ತಾವದ ಕುರಿತು ವಿರೋಧ ಪಕ್ಷಗಳೊಂದಿಗೂ ಚರ್ಚೆಯನ್ನು ಸಹ ಮಾಡದೇ ತರಾತುರಿಯಲ್ಲಿ ಅನುಷ್ಠಾನಕ್ಕೆ ತರಲು ಹೊರಟಿರುವುದು ಸರಿಯಲ್ಲ ಎಂದು ಅವರು ಆಕ್ಷೇಪಿಸಿದರು.

ಏಕಕಾಲಕ್ಕೆ ಕೇಂದ್ರ ಮತ್ತು ವಿಧಾನಸಭೆಗಳಿಗೆ ಚುನಾವಣೆ ಮಾಡಲು ಹೊರಟಿರುವುದು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ದುಷ್ಟ ಉದ್ದೇಶವನ್ನು ತೋ-ರಿಸುತ್ತದೆ. ಒಂದು ಸರ್ಕಾರದ ಆದ್ಯತೆಗಳು ಏನಾಗಿರಬೇಕು ಎನ್ನುವ ಸಾಮಾನ್ಯ ಜ್ಞಾನವು ಕೇಂದ್ರ ಸರ್ಕಾರಕ್ಕಾಗಲಿ, ಪ್ರಧಾನಿಯವ-ರಿಗೆ ಇದ್ದಂತೆ ಕಾಣಿಸುತ್ತಿಲ್ಲ. ದೇಶಾದ್ಯಂತ ನಿರುದ್ಯೋಗ ತಾಂಡವವಾಡುತ್ತಿದೆ. ಹಣದುಬ್ಬರದಿಂದ ದೇಶದ ಆರ್ಥಿಕತೆ ತತ್ತರಿಸುತ್ತಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನ ಸಂಕಷ್ಟದಲ್ಲಿದ್ದಾರೆ. ದೇಶಾದ್ಯಂತ ಕಾನೂನು ಸುವ್ಯವಸ್ಥೆಯ ಮೇಲಿನ ನಿಯಂತ್ರಣ ತಪ್ಪಿ ಹೋಗಿದ್ದು, ದಲಿತರು ಮತ್ತು ಮಹಿಳೆಯರ ಮೇಲೆ ದೌರ್ಜನ್ಯಗಳು ಮಿತಿ ಮೀರಿ ಹೋಗುತ್ತಿವೆ. ಆ ಕುರಿತು ಯೋಚನೆ ಮಾಡಲು ಕೂಡ ಸಮಯವಿಲ್ಲದ ಪ್ರಧಾನಿ ಗಿಮಿಕ್ ಮೂಲಕ ಗಮನವನ್ನು ಬೇರೆಡೆ ಸೆಳೆದು ತಮ್ಮ ವೈಫಲ್ಯ ಮುಚ್ಚಿ ಹಾಕಲು ಮುಂದಾಗಿದ್ದಾರೆ ಎಂದು ಅವರು ದೂರಿದರು.

ಒಂದು ದೇಶ, ಒಂದು ಚುನಾವಣೆ ವ್ಯವಸ್ಥೆ ಸಂಪೂರ್ಣವಾಗಿ ಪ್ರಜಾಪ್ರಭುತ್ವಕ್ಕೆ ವಿರೋಧಿಯಾಗಿದೆ. ಲೋಕಸಭೆ ಅಥವಾ ವಿಧಾನಸಭೆಯಲ್ಲಿ ಆಡಳಿತಾರೂಢ ಪಕ್ಷ ವಿಶ್ವಾಸ ಮತ ಗಳಿಸಲು ಸೋತರೆ ಎದುರಾಗುವ ಬಿಕ್ಕಟ್ಟಿಗೆ ಪ್ರಸ್ತಾಪದಲ್ಲಿ ಪರಿಹಾರವಿಲ್ಲ, ಇಂತಹ ಸಂದರ್ಭದಲ್ಲಿ ಮಧ್ಯಂತರ ಚುನಾವಣೆಯೊಂದೇ ಯೋಗ್ಯ ಪರಿಹಾರವಾಗಿದೆ ಎಂದು ಅವರು ಹೇಳಿದರು.




ಲೋಕಸಭೆಯಲ್ಲಿನ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಮೀಸಲಾತಿ ವಿರೋಧಿ ಹೇಳಿಕೆ ನೀಡಿದ್ದಾರೆ ಎಂದು ಸುಳ್ಳು ಆರೋಪ ಮಾಡಿ ಬಿಜೆಪಿ, ಜೆಡಿಎಸ್ ನಾಯಕರು ಮಾಡುತ್ತಿರುವ ಪ್ರತಿಭಟನೆ ಖಂಡನಾರ್ಹ. ಸದಾ ಮೀಸಲಾತಿಯನ್ನು ವಿರೋಧಿಸುತ್ತ ಬಂದಿರುವ ಬಿಜೆಪಿಯವರು ಸಂವಿಧಾನವನ್ನೇ ಬದಲಾಯಿಸಲು ಹೊರಟವರಿಗೆ ಇಂತಹ ಪ್ರತಿಭಟನೆ ಮಾಡುವ ಯಾವ ನೈತಿಕತೆ ಇದೆ? ಎಂದು ಅವರು ಖಾರವಾಗಿ ಪ್ರಶ್ನಿಸಿದರು. ಮೀಸಲಾತಿ ವಿರೋಧವನ್ನು ರಕ್ತಗತವಾಗಿಸಿಕೊಂಡಿರುವ ಬಿಜೆಪಿ ನಾಯಕ-ರಿಗೆ ರಾಹುಲ್‌ಗಾಂಧಿ ಅವರ ಹೇಳಿಕೆಯನ್ನು ಅರ್ಥ ಮಾಡಿಕೊಳ್ಳುವ ಜ್ಞಾನವಾಗಲಿ, ವ್ಯವಧಾನವಾಗಲಿ ಇಲ್ಲದಿರುವುದು ಆಶ್ಚರ್ಯವೇನಲ್ಲ. ವಿದ್ಯೆ, ಉದ್ಯೋಗ ಮತ್ತು ಅವಕಾಶಗಳಲ್ಲಿ ಸರ್ವರಿಗೂ ಸಮಾನ ಪಾಲನ್ನು ನೀಡುವುದೇ ಮೀಸಲಾತಿಯ ಉದ್ದೇಶ. ಆ ಉದ್ದೇಶ ಸಾಧನೆಯಾಗಬೇಕು. ಅದನ್ನು ರಾಹುಲ್‌ಗಾಂಧಿ ಅವರು ಹೇಳಿದ್ದಾರೆ. ಅದು ಹೇಗೆ ಮೀಸಲಾತಿ ವಿರೋಧಿ ಹೇಳಿಕೆಯಾಗುತ್ತದೆ ಎಂದು ಪ್ರಶ್ನಿಸಿದ ಅವರು, ಸರ್ವರಿಗೂ ಶಿಕ್ಷಣ, ಉದ್ಯೋಗ ಮತ್ತು ಅವಕಾಶಗಳಲ್ಲಿ ಸಮಾನ ಪಾಲು ಸಿಗಬೇಕೆಂಬ ಉದ್ದೇಶದಿಂದಲೇ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಮೀಸಲಾತಿ ನೀತಿಯನ್ನು ಸಂವಿಧಾನದಲ್ಲಿ ಅಳವಡಿಸಿದ್ದರು.

ಆದಾಗ್ಯೂ, ಮೀಸಲಾತಿಯ ಹೊರತಾಗಿಯೂ ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯತರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಸಮಾನ ಅವಕಾಶ ಇನ್ನೂ ಸಿಕ್ಕಿಲ್ಲ. ಸಾಮಾಜಿ-ಕ ಅಸಮಾನತೆ ಕಡಿಮೆಯಾಗಿಲ್ಲ. ಅದಕ್ಕೆ ಬಿಜೆಪಿ ನಾಯಕರಂತಹ ಜಾತಿ ಪಟ್ಟಭದ್ರರು ಕಾರಣ ಎಂಬುದು ಸೂರ್ಯನಷ್ಟೇ ಸತ್ಯ ಎಂದು ದೂಷಿಸಿದರು. ಬಿಜೆಪಿಯ ಮಾತೃ ಸಂಸ್ಥೆಯಾದ ಹುಟ್ಟಿನಿಂದಲೇ ವರ್ಣ ವ್ಯವಸ್ಥೆಯನ್ನು ಸಮರ್ಥಿಸಿಕೊಂಡು ಬಂದಿರುವುದಕ್ಕೆ ಇತಿಹಾಸವೇ ಸಾಕ್ಷಿ. ಸಾಮಾಜಿಕ ನ್ಯಾಯದಾನದ ಅವಕಾಶಗಳು ತೆಗೆದುಕೊಂಡಾಗೆಲ್ಲ ಅದರ ವಿರುದ್ಧ ಹೋರಾಟ ಮಾಡುವುದು ಬಿಜೆಪಿ, ಕರ್ನಾಟಕದ ಸ್ಥಳೀಯ ಸಂಸ್ಥೆಗಳಲ್ಲಿನ ಮೀಸಲಾತಿಯನ್ನು ವಿರೋಧಿಸಿ ದಿ. ನ್ಯಾ. ರಾಮಾಜೋಯಿಸ್ ಅವರಿಂದ ಸುಪ್ರಿಂಕೋರ್ಟ್ ಕಟ್ಲೆ ಹಾಕಿಸಿದ್ದ ಬಿಜೆಪಿ ದೇಶದ ಪ್ರತಿಯೊಂದು ರಾಜ್ಯದಲ್ಲಿಯೂ ಮೀಸಲತಿಯನ್ನು ವಿರೋಧಿಸಿ ಚಳುವಳಿ ಮಾಡಿದೆ ಎಂದು ಅವರು ಆಕ್ರೋಶ ಹೊರಹಾಕಿದರು. ಬಿಜೆಪಿ ಮಂಡಲ್ ವರದಿಗೆ ವಿರುದ್ಧವಾಗಿ ಕಮಂಡಲ ಚಳುವಳಿಗೆ ಚಾಲನೆ ನೀಡಿ ತಲೆಯಲ್ಲಿ ಧರ್ಮದ ಅಫೀಮು ತುಂಬುವ ಪ್ರಯತ್ನ ಮಾಡಿತು.

ಕೋಮುವಾದದ ಗುರಿ ಕೇವಲ ಅಲ್ಪಸಂಖ್ಯಾತರಲ್ಲ, ದಲಿತ ಮತ್ತು ಅಲ್ಪಸಂರ್ಖಯಾತ ಸಮುದಾಯದ ನಾಶವು ಅದರ ಗುರಿಯಾಗಿದೆ. ಮೀಸಲಾತಿಯು ಸೇರಿದಂತೆ ಸಾಮಾಜಿಕ ನ್ಯಾಯದಾನದ ಅವಕಾಶಗಳನ್ನು ಕಾಲಕಾಲಕ್ಕೆ ಹೇಗೆ ಬಿಜೆಪಿ ಮತ್ತು ಸಂಘ ಪರಿವಾರ ಚಿವುಟಿ ಹಾಕಿದೆ ಎನ್ನುವುದನ್ನು ನಮ್ಮ ಜನ ನೋಡಿ ಅನುಭವಿಸಿ ತಿಳಿದುಕೊಂಡಿದ್ದಾರೆ. ಅವರ ಹುಸಿ ಸಾಮಾಜಿಕ ನ್ಯಾಯದ ಘೋಷಣೆಗೆ ಅವರು ಮರಳಾಗುವುದಿಲ್ಲ ಎಂದು ಅವರು ಹೇಳಿದರು. ಸಮಾನ ಅವಕಾಶ ಸಿಕ್ಕಿದೆಯೋ ಇಲ್ಲವೇ ಎನ್ನುವುದನ್ನು ತಿಳಿದುಕೊಳ್ಳಲಿಕ್ಕಾಗಿಯೇ ಸುಪ್ರಿಂಕೋರ್ಟ್ ಜಾತಿ ಆಧಾರದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸಬೇಕೆಂದು ಹೇಳಿದೆ. ಅದನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಾಡಿದೆ. ಬಿಜೆಪಿ ನಾಯಕರಿಗೆ ಮತ್ತು ಕೇಂದ್ರದಲ್ಲಿರುವ ಸರ್ಕಾರಕ್ಕೆ ಸಾಮಾಜಿಕ ನ್ಯಾಯದ ಕುರಿತು ಅಷ್ಟೊಂದು ಕಾಳಜಿ ಇದ್ದರೆ ಮೊದಲು ಜಾತಿ ಗಣತಿಯನ್ನು ಶೀಘ್ರವಾಗಿ ದೇಶಾದ್ಯಂತ ನಡೆಸಿ ತೋರಿಸಬೇಕು. ಮೀಸಲಾತಿ ಸಮಾಜದ ಕಟ್ಟ ಕಡೆಯ ಮನುಷ್ಯನಿಗೆ ತಲುಪಿದೆಯೇ ಇಲ್ಲವೇ ಎನ್ನುವುದನ್ನು ತಿಳಿದುಕೊಳ್ಳಲು ಇದು ಅವಶ್ಯಕವಾಗಿದೆ ಎಂದು ಅವರು ತಿಳಿಸಿದರು.

ಮೀಸಲಾತಿ ಪ್ರಮಾಣವನ್ನು ಈಗಿನ ಶೇಕಡಾ 50ರಿಂದ ಶೇಕಡಾ 75ಕ್ಕೆ ಹೆಚ್ಚಿಸಲು ಕಾಂಗ್ರೆಸ್ ಪಕ್ಷ ಬದ್ಧವಾಗಿದೆ ಎಂದು ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಬಹಿರಂಗ ಸಭೆಯಲ್ಲಿ ಮಾತ್ರವಲ್ಲ, ಲೋಕಸಭೆಯಲ್ಲಿಯೂ ಹೇಳಿದ್ದಾರೆ.

ಬಿಜೆಪಿ, ಜೆಡಿಎಸ್ ನಾಯಕರಿಗೆ ಮೀಸಲಾತಿ ಕುರಿತು ಅಷ್ಟೊಂದು ಬದ್ಧತೆ ಇದ್ದರೆ ಮೀಸಲಾತಿಯ ಪ್ರಮಾಣವನ್ನು ಈಗಿನ ಶೇಕಡಾ 50ರಿಂದ 75ಕ್ಕೆ ಹೆಚ್ಚಿಸಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಅವರು ಆಗ್ರಹಿಸಿದರು. ಜಾತಿನಿಂದನೆ ಜೊತೆ ಜೀವ ಬೆದರಿಕೆ ಆರೋಪ ಹೊತ್ತ ಬೆಂಗಳೂರಿನ ರಾಜರಾಜೇಶ್ವರಿ ನಗರ ಬಿಜೆಪಿ ಶಾಸಕ ಮುನಿರತ್ನ ಅವರಿಗೆ ಕಠಿಣ ಶಿಕ್ಷೆಗೆ ಒಳಪಡಿಸಬೇಕುಎಂದುಒತ್ತಾಯಿಸಿದಅವರು, ಒಕ್ಕಲಿಗ ಮತ್ತು ದಲಿತ ಸಮುದಾಯಗಳಿಗೆ ಅವಹೇಳನ ಮಾಡಿರುವ ಕುರಿತು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಬಿ.ಸಿ. ವಾಲಿ, ಸುರೇಶ್ ಹಾದಿಮನಿ, ಹೆಚ್. ಶಂಕರ್, ಕೃಷ್ಣಪ್ಪ ಕರಣಿಕ್ ಮುಂತಾದವರು ಉಪಸ್ಥಿತರಿದ್ದರು.

### ತಾಲೂಕಿನಲ್ಲಿ41.8ರಷ್ಟು ಬೆಳೆಹಾನಿ ವರದಿ, ಪ್ರವಾಹ21,ಮಳೆ 68 ರೈತರಿಗೆ ಹಾನಿ

# ಬೆಳೆಹಾನಿ ಜಂಟಿ ಸಮೀಕ್ಷೆ ಸಮರ್ಪಕವಾಗಿಲ್ಲ ರೈತರ ಆಕ್ರೋಶ, ಮರುಸಮೀಕ್ಷೆಗೆ ಒತ್ತಾಯ?

ಲಿಂಗಸಗೂರು: ಇತ್ತೀಚೆಗೆ ಜುಲೈ ಹಾಗೂ ಆಗಷ್ಟನಲ್ಲಿ ತಾಲೂಕಿನಲ್ಲಿ ಸುರಿದ ಮಳೆಗೆ ಹಾಗೂ ಪ್ರವಾಹಕ್ಕೆ ಬೆಳೆಹಾನಿಯಾಗಿದ್ದು ಕೃಷಿ ಇಲಾಖೆ ಹಾಗೂ ಕಂದಾಯ ಇಲಾಖೆ ಜಂಟಿ ಸರ್ವೆ ಮಾಡಿದ್ದು ಅದರಲ್ಲಿ ಕೇವಲ41.8ರಷ್ಟು ಮಾತ್ರ ಹಾನಿಯಾಗಿದೆ ಎಂದು ವರದಿಯಾಗಿದ್ದು ಅದು ಸಮರ್ಪಕವಾಗಿಲ್ಲವೆಂದು ರೈತರು ಆಕ್ರೋಶ ವ್ಯಕ್ತಪಡಿಸಿದಾರೆ

ಪತ್ರಿಕೆಗೆ ದೊರಕಿರುವ ಮಾಹಿತಿಯ ಪ್ರಕಾರ 2024–25 ನೇ ಸಾಲಿನ ನೈಸರ್ಗಿಕ ವಿಕೋಪದಡಿ ತಾಲೂಕಿನಲ್ಲಿ ಜುಲೈ ಹಾಗೂ ಆಗಷ್ಟನಲ್ಲಿ ಸುರಿದ ಮಳೆಯಿಂದ ಮಳೆ ಮತ್ತು ಪ್ರವಾಹದಿಂದ ಹಾನಿಯಾಗಿದ್ದು ಅದರಲ್ಲಿ ಕೆಲವೇ ಗ್ರಾಮಗಳ ಹೆಸರು ಇದ್ದು ಕಡಿಮೆ ರೈತರ ಹೆಸರುಗಳಿವೆ ಇನ್ನು ಹಲವಾರು ರೈತರ ಬೆಳೆಹಾನಿಯಾಗಿವೆ ಆದರೆಸರ್ವೇಕಾರ್ಯವುಸಮರ್ಪಕವಾಗಿಲ್ಲ ಅದಕ್ಕಾಗಿ ಮರುಸರ್ವೇ ಮಾಡಬೇಕೆಂದು ರೈತರು ಒತ್ತಾಯಿಸಿದ್ದಾರೆ

ತಾಲೂಕಿನಲ್ಲಿ ಮಳೆಯಿಂದ ಹಾನಿಯಾಗಿರುವುದು ಕೇವಲ 68 ರೈತರ ಬೆಳೆ ಎಂದು ವರದಿ ಮಾಡಲಾಗಿದ್ದು ಅದರಲ್ಲಿ ಕೋಠಾ15 ರೈತರು, ಮೇದಿನಾಪುರ14 ರೈತರು, ಯರಡೋಣ 6ರೈತರು, ಹೊನ್ನಳ್ಳಿ 3ರೈತರು ದೇವರಭೂಪುರ2,ಘೂಲಬಾವಿ1 ಪ್ರವಾಹಕ್ಕೆ 21 ರೈತರ ಬೆಳೆಗಳು ಹಾನಿಯಾಗಿವೆ ಎನ್ನಲಾಗುತ್ತಿದೆ ಹೀಗೆ ಆಯಾ ಗ್ರಾಮಗಳಿಗೆ ಕೆಲವೇ ರೈತರ ಹೆಸರುಗಳಿದ್ದು ಆಯಾ ಗ್ರಾಮದಲ್ಲಿ ಇನ್ನು ಹೆಚ್ಚಿನ ರೈತರು ಹಾನಿಗೆ ಒಳಗಾಗಿದ್ದಾರೆ ಎನ್ನುವ ಆರೋಪಗಳು ಕೇಳಿ ಬರುತ್ತವೆ




ಜುಲೈ ಹಾಗೂ ಆಗಷ್ಟನಲ್ಲಿ ಉಂಟಾದ ಹಾನಿಯ ಬಗೆಗೆ ಈಗಾಗಲೆ ಜಿಲ್ಲಾಧಿಕಾರಿಗಳಿಗೆ ಕಳುಹಿಸಲಾಗಿದ್ದು ಸೆಪ್ಟಂಬರ 6ರಂದು ಅಂತಿಮಪಟ್ಟಿ ಬಿಡುಗಡೆ ಮಾಡಲಾಗಿದ್ದು ಅದಕ್ಕೆ ಆಕ್ಷೇಪಣೆಗಳು ಇದ್ದರೆ ಒಂದು ವಾರದಲ್ಲಿ ಸಲ್ಲಿಸಬೇಕು ಎನ್ನುವ ಗಡುವನ್ನು ನೀಡಲಾಗಿದೆ ಆದರೆ ವಾಸ್ತವವಾಗಿ ಅದರ ಬಗೆಗೆ ರೈತರಿಗೆ ಸರಿಯಾದಮಾಹಿತಿಯೆಇಲ್ಲವೆನ್ನಲಾಗುತ್ತಿದೆ

"ನಮ್ಮ ಗ್ರಾಮ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ಮಳೆಗೆ ಸಾಕಷ್ಟು ಪ್ರಮಾಣದಲ್ಲಿ ಬೆಳೆಗಳು ಹಾನಿಯಾಗಿವೆ ಆದರೆ ಗ್ರಾಮದಲ್ಲಿ 15 ಜನರೈತರ ಹೆಸರು ಅಷ್ಟೆ ಇರುವುದು ಕಂಡು ಬಂದಿದ್ದು ಸಮೀಕ್ಷೆ ಯಾವ ರಿತಿ ಮಾಡಿದ್ದಾರೆಯೊ ತಿಳಿಯದಾಗಿದೆ ಅಲ್ಲದೆ ನಮ್ಮ ಗ್ರಾಮಕ್ಕೆ ಸಮೀಕ್ಷೆಗಾದರು ಯಾವಾಗ ಬಂದಿದ್ದಾರೆ ಎನ್ನುವುದು ಗೊತ್ತಿಲ್ಲ"– ಅಮರೇಗೌಡ ಗ್ರಾ,ಪಂ ಮಾಜಿ ಅಧ್ಯಕ್ಷರು ಹಾಗೂ ರೈತರು ಕೋಠಾ ಗ್ರಾಮ

"ಕಾಳಾಪುರ ಗ್ರಾಮಪಂಚಾಯ್ತಿ ವ್ಯಾಪ್ತಿಯಲ್ಲಿ ಕೇವಲ ಎರಡುಮೂರು ರೈತರ ಹೆಸರುಗಳು ಮಾತ್ರ ಇವೆ ಇನ್ನು ಹೆಚ್ಚಿನ ರೈತರ ಹೊಲಗಳಲ್ಲಿ ಬೆಳೆಹಾನಿಯಾಗಿದೆ ಬೆಳೆಸಮೀಕ್ಷೆ ಯಾವ ರೀತಿಯಿಂದ ಮಾಡಿದ್ದಾರೆ ತಿಳಿಯದಾಗಿದೆ– ವೆಂಕನಗೌಡ ಪಾಟೀಲ್ ಐದನಾಳ ರಾಜಕೀಯ ಮುಖಂಡರು ಹಾಗೂ ರೈತರು

"ರೈತರಿಂದ ಆಕ್ಷೇಪಣೆಗಳು ಕೇಳಿ ಬರುತ್ತಿವೆ ಅವುಗಳನ್ನು ಸರಿಪಡಿಸುವ ಕೆಲಸ ಮಾಡುತ್ತೇವೆ– ಕೃಷಿ ಅಧಿಕಾರಿ ಲಿಂಗಸಗೂರು

# ರಾಂಪೂರ ಗ್ರಾಮದ ಸರಕಾರಿ ಜಮೀನಿನಲ್ಲಿ ಅನಧಿಕೃತ ನಿವೇಶನ ರಚಿಸಿ ಮಾರಾಟ ದೂರು

ಲಿಂಗಸುಗೂರ:ತಾಲೂಕಿನ ರಾಂಪೂರ ಗ್ರಾಮದ ಸರ್ವೆ ನಂ1/5 ರಲ್ಲಿ 1ಎಕರೆ ಸರಕಾರಿ ಜಮೀನಲ್ಲಿ ಅನಧಿಕೃತ ನಿವೇಶನಗಳನ್ನು ಮಾಡಿ ಮಾರಾಟ ಮಾಡಿದವರ ಮೇಲೆ ಸೂಕ್ತ ಕ್ರಮ ಕೈಗೊಂಡು ಸದರಿ ಭೂಮಿಯನ್ನು ಸರಕಾರ ಸ್ವಾಧೀನ ಪಡಿಸಿಕೊಳ್ಳಬೇಕು ಎಂದು ರಾಂಪೂರ ಗ್ರಾಮಸ್ಥರು ಸಹಾಯಕ ಆಯುಕ್ತರಿಗೆ ಲಿಖಿತ ದೂರು ಸಲ್ಲಿಸಿರುವರು.

ಲಿಂಗಸುಗೂರ ಹೊಬಳಿಯ ರಾಂಪೂರ ಗ್ರಾಮದಲ್ಲಿರುವ ಸರ್ವೇ ನಂ 1/5 ಕ್ಷೇತ್ರ 2ಎಕರೆ 32ಗುಂಟೆ ಜಮೀನು ಭೀಮೇಶಪ್ಪ ತಂ ಶಿವಪ್ಪ ಎಂಬುವರ ಹೆಸರಿನಲ್ಲಿದ್ದು ಸದರಿ ಜಮೀನಿನ್ನ ವಿಸ್ತೀರ್ಣದಲ್ಲಿ 1ಎಕರೆ ಜಮೀನು ಆಸರೆ ಯೋಜನೆಯಡ್ಡಿ ಗೃಹ ನಿರ್ಮಾಣಕ್ಕಾಗಿ ಉಪಯೋಗಿಸಲು ಕರ್ನಾಟಕ ಸರಕಾರದ ಪರವಾಗಿ ಅಂದಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ.ಎಸ ಹಿರೇಮಠ ಅವರು ದಿನಾಂಕ04–04–1996 ರಂದು ನೋಂದಣಿ ಸಂಖ್ಯೆ 451/96–97 ಭೀಮೇಶಪ್ಪ ಅವರಿಂದ ಖರೀದಿ ಮಾಡಿರುತ್ತದೆ ಸದರಿ 1ಎಕರೆ ಜಮೀನು ಖರೀದಿ ಪತ್ರದ ಪ್ರಕಾರ ಮೂಟೇಷನ್ ನಂ6 ದಿನಾಂಕ 28–05–1997ರ ಆದೇಶದ ಪ್ರಕಾರ ಪಹಣಿ ಪತ್ರಿಕೆ ಕಾಲಂ09ರಲ್ಲಿ ಮಾನ್ಯ ರಾಜಪಾಲರು ಕರ್ನಾಟಕ ಸರಕಾರ ನಮೂದುವಿರುತ್ತದೆ.

ಸರಕಾರವು ಇಲ್ಲಿವರೆಗೆ ಖರೀದಿ ಮಾಡಿರುವ ಜಮೀನಿನಲ್ಲಿ ಯಾವದೇ ಯೋಜನೆ ಅಡಿಯಲ್ಲಿ ಯಾರಿಗೂ ಕೂಡ ನಿವೇಶನ ಮಂಜೂರ ಮಾಡಿರುವುದಿಲ್ಲ ಆದರೆ ಸದರಿ 1ಎಕರೆ ಜಮೀನಿನಲ್ಲಿ ಆಸರೆ ಯೋಜನೆಯಡ್ಡಿಯಲ್ಲಿ ಮನೆ ಮಂಜೂರು ಆಗದ ಕಾರಣ ದೂರುದ್ದೇಶದಿಂದ ಸದರಿ ಭೀಮೇಶಪ್ಪ ತಂ ಶಿವಪ್ಪ ಅವರು ಸರಕಾರಕ್ಕೆ ಮಾರಿದರು ಸಹಿತ ಸದರಿ ಜಮೀನಿನಲ್ಲಿ ನಿವೇಶನಗಳನ್ನು ಮಾಡಿ ಜನರಿಗೆ ಮಾರಾಟ ಮಾಡಿ ಸರಕಾರಕ್ಕೆ ಮೋಸ ಮಾಡಿದ್ದಾರೆ ಆದರಿಂದ ತಾವುಗಳು ಸರಕಾರಕ್ಕೆ ಸೇರಿದ 1ಎಕರೆ ಜಮೀನಿನ್ನ ದಾಖಲೆಗಳನ್ನು ಹಾಗೂ ಸ್ಥಳ ಪರಿಶಿಲನೆ ಮಾಡಿ ಸರಕಾರದ ಸ್ವಾಧೀನಕ್ಕೆ ತಗೆದುಕೊಂಡು ಕಾನೂನು ಬಾಹಿರವಾಗಿ ಮಾರಾಟ ಮಾಡಿರುವರ ಮೇಲೆ ಸೂಕ್ತ ಕಾನೂನು ಕ್ರಮ ಜರಗಿಸಿ ಗ್ರಾಮದ ಫಲಾನುಭವಿಗಳಿಗೆ ನಿವೇಶನಗಳನ್ನು ಮರು ಹಂಚಿಕೆ ಮಾಡಬೇಕು ಎಂದು ಹನುವ ಗೌಡ ನೇತೃತ್ವದಲ್ಲಿ ದೂರ ಸಲ್ಲಿಸಿರುವರು.



ಲಿಂಗಸುಗೂರ ತಾ.ಪಂ ಇಒಅವರಿಗೆ ರಾಂಪೂರು ಗ್ರಾಮಸ್ಥರು ಮನವಿ ಪತ್ರ ಸಲ್ಲಿಸಿದರು.

ಸಂದರ್ಭದಲ್ಲಿ ಗ್ರಾಮಸ್ಥರಾದ ದುರಗಮ್ಮ, ರಾಮಣ್ಣ, ಯಲಪ್ಪ, ಕಸ್ತೂರಿಬಾಯಿ, ರಮೇಶ,ಈರಪ್ಪ, ಮಾನಪ್ಪ, ಹನುಮಪ್ಪ, ಅವಮ್ಮ, ಅಂಜನೇಯ, ನಾಗಮ್ಮ, ಅಮರೇಗೌಡ, ವೀರಭದ್ರಪ್ಪ, ಸಂಗಮ್ಮ, ಲಕ್ಷ್ಮಿ, ಶಂಕ್ರಮ್ಮ, ದೇವಮ್ಮ, ಹುಲಿಗೆಮ್ಮ, ಮಹಾದೇವಮ್ಮ, ಬಾಲಪ್ಪ, ಶಿವರಾಜ, ಅಯ್ಯಮ್ಮ ಹಾಗೂ ಇತರರು ಇದ್ದರು.

# ಉರ್ದು ಶಾಲೆಯಲ್ಲಿ ಮಾತೃ ಭಾಷೆಗೆ ಆದ್ಯತೆ ನೀಡಬೇಕು: ರಾಠೋಡ

ಲಿಂಗಸುಗೂರ :ನಮ್ಮ ಭಾಗದ ಉರ್ದು ಮಕ್ಕಳಿಗೆ ಒಳ್ಳೆಯ ಶಿಕ್ಷಣ ದೊರೆಯಬೇಕು ಮಕ್ಕಳು ಚನ್ನಾಗಿ ಉರ್ದು ಭಾಷೆಯನ್ನ ಕಲಿಯಬೇಕು ಇದರ ಜೊತೆ ಜೊತೆಗೆ ಕನ್ನಡ, ಹಿಂದಿ , ಇಂಗ್ಲಿಷ್ ಭಾಷೆಯನ್ನು ಕಲಿಯಬೇಕು. ಇಷ್ಟೂ ಭಾಷೆಯನ್ನ ಮಕ್ಕಳು ಕಲಿತರೆ ದೇಶದ ಯಾವುದೇ ಭಾಗದಲ್ಲೂ ಹೋಗಿ ಮುಂದೆ ಜೀವನ ಸಾಗಿಸಬಹುದು ಎಂದು ಕ್ಷೇತ್ರ ಶಿಕ್ಷಣಧಿಕಾರಿ ಹೊಂಬಣ್ಣ ರಾಠೋಡ್ ಹೇಳಿದರು.

ಅವರು ಪಟ್ಟಣದ ಬಿಆರ್‌ಸಿ ಆವರಣದಲ್ಲಿ ಹಮ್ಮಿಕೊಂಡಿದ್ದ ಉರ್ದು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಈ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿದರೆ ಒಳ್ಳೆ ಶಿಕ್ಷಕರು ಇಲ್ಲೇ ಇರುತ್ತಿದ್ದರು ನಾವು ಬೇರೆ ಭಾಗದ ಶಿಕ್ಷಕರನ್ನು ನಾವು ಕರೆಸುವಂತಿರಲಿಲ್ಲ ಈ ಭಾಗದ ಶಾಲೆಗಳಲ್ಲಿ ಹೆಚ್ಚಿನ ಉರ್ದು ಶಿಕ್ಷಕರ ಕೊರತೆ ಇದೆ . ನಮ್ಮ ಭಾಗದ ಉರ್ದು ಭಾಷೆ ಸೇರಿ 5 ಸಾವಿರ ಶಿಕ್ಷಕರ ನೇಮಕಾತಿ ನಡೆಯುತ್ತಿದೆ. ಶೇ 80 ರಷ್ಟು ನಮ್ಮ ಭಾಗದ ಶಿಕ್ಷಕರಿಗೆ ಅನುಕೂಲ ಆಗುತ್ತದೆ. ಯಾವುದೇ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಉರ್ದು ಪ್ರತಿಭಾ ಕಾರಂಜಿ ಕಾರ್ಯಕ್ರಮ ಮುಂದಿನ ದಿನದಲ್ಲಿ ಎಲ್ಲಾ ಉರ್ದು ಶಾಲೆಯಲ್ಲೂ ಮಾಡಬೇಕು ಮಕ್ಕಳನ್ನು ಪ್ರೋತ್ಸಾಯಿಸ ಬೇಕು ಎಂದರು.

ಈ ಸಂದರ್ಭದಲ್ಲಿ ರಾಜ್ಯ ನೌಕರರ ಸಂಘದ ತಾಲೂಕಾ ಅಧ್ಯಕ್ಷ ಹಾಜಿ ಬಾಬಾ ಕಲ್ಯಾಣಿ, ಮಹಮ್ಮದ್ ರಫಿ , ರೌಫ್ ಗ್ಯಾರೆಂಟಿ , ಮಹಮ್ಮದ್ ಕೆ ಎಫ್ ಸಿ , ಯೂನುಸ್ ಮುಫ್ತಿ , ಸಿಆರ್‌ಪಿ ಷೇಕ್ ಅಜಿಮ್, ಬಾಬಾ ಖಾಜಿ ಫಯಾಜ್ ಮನಿಯಾರ್, ಇಬ್ರಾಹಿಂ ಸೇರಿದಂತೆ ಇತರರು ಇದ್ದರು.


ಲಿಂಗಸುಗೂರ ಪಟ್ಟಣದ ಬಿಆರ್‌ಸಿ ಆವರಣದಲ್ಲಿ ಹಮ್ಮಿಕೊಂಡಿದ್ದ ಉರ್ದು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಧಿಕಾರಿ ಹೊಂಬಣ್ಣ ರಾಠೋಡ್ ಉದ್ಘಾಟಿಸಿದರು ಹಾಜಿ ಬಾಬಾ, ಮಹಮ್ಮದ್ ರಫಿ , ರೌಫ್ ಗ್ಯಾರೆಂಟಿ ಇರುವರು.

### ಮಲಘಾಣ: ತಂದೆತಾಯಿ ಸ್ಮರಣಾರ್ಥ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

# ಶಿಕ್ಷಣಪ್ರೇಮಿ ಬಿರಾದಾರ ಕುಟುಂಬದಿಂದ ಪ್ರೇರಣೀಯ ಸೇವೆ: ಗರಸಂಗಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಸವನಬಾಗೇವಾಡಿ ತಾಲ್ಲೂಕಿನ ಮಲಘಾಣದ ನಿವೃತ್ತ ಶಿಕ್ಷಕ ಲಿಂಗೈಕ್ಯ ಹಣಮಂತಗೌಡ ತಿಮ್ಮನಗೌಡ ಬಿರಾದಾರ ಹಾಗೂ ಅವರ ಧರ್ಮಪತ್ನಿ ಲಿಂ. ಕಸ್ತೂರಿ ಅವರ ಸ್ಮರಣಾಥ–ರ್ ಶಿಕ್ಷಣಪ್ರೇಮಿಗಳಾಗಿರುವ ಅವರ ಮೂವರು ಮಕ್ಕಳು ಕಳೆದ 6 ವರ್ಷಗಳಿಂದ ಗ್ರಾಮದ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಪರಂಪರೆ ಮುಂದುವರೆಸಿಕೊಂಡು ಬಂದಿದ್ದು ಪ್ರೇರಣೀಯ ಸೇವೆಗೈಯುತ್ತಿದ್ದಾರೆ ಎಂದು ನಿವೃತ್ತ ಶಿಕ್ಷಕ ಎಸ್.ಎಸ್.ಗರಸಂಗಿ ಶ್ಲಾಘನೆ ವ್ಯಕ್ತಪಡಿಸಿದರು.

ಮಲಘಾಣದ ಆರಾಧ್ಯದೈವ ಸದ್ಗುರು ಸದಾನಂದ ಶಿವಯೋಗಿಗಳ 52 ನೇ ಪುಣ್ಯಾರಾಧನೆ ಹಾಗೂ ಜಾತ್ರೋತ್ಸವ ನಿಮಿತ್ತ ಶುಕ್ರವಾರ ಶಿವಯೋಗಾಶ್ರಮದಲ್ಲಿ ಜರುಗಿದ ಧರ್ಮಸಭೆಯಲ್ಲಿ ಪ್ರತಿಭಾನ್ವಿತ ಮಕ್ಕಳಿಗೆ ಪ್ರೋತ್ಸಾಹಧನ ವಿತರಿಸುವ ವೇಳೆ ಅವರು ಮಾತನಾಡಿದರು.

ನಿವೃತ್ತ ಶಿಕ್ಷಕ ಲಿಂ. ಹಣಮಂತಗೌಡ ತಿಮ್ಮನಗೌಡ ಬಿರಾದಾರ ಶಿಕ್ಷಕರಾಗಿದ್ದರೂ ಜೀವನದಲ್ಲಿ ಕಷ್ಟಪಟ್ಟು ಅವರ ಮೂವರು ಮಕ್ಕಳಾದ ಡಾ.ಮಹಾಂತೇಶ ಬಿರಾದಾರ, ಪಾಂಡುರಂಗ ಬಿರಾದಾರ ಹಾಗೂ ಡಾ.ವಾಸಂತಿ ಪಾಟೀಲ್ ಅವ–ರಿಗೆ ನೈತಿಕ, ಮೌಲ್ಯಯುತ ಶಿಕ್ಷಣ ನೀಡಿ ಇಂದು ಎಲ್ಲರೂ ನೌಕರಸ್ಥರಾಗಿ ಉನ್ನತ ಸ್ಥಾನಮಾನದಲ್ಲಿದ್ದಾರೆ. ಸದ್ಯ ಮೂವರು ಮಕ್ಕಳು ತಂದೆತಾಯಿ ಸ್ಮರಣಾರ್ಥ ಗ್ರಾಮದ ಸೊಸೈಟಿಯಲ್ಲಿ ನಿಶ್ಚಿತ ಠೇವಣಿ ಹಣವಿಟ್ಟು ಅದರಿಂದ ಪ್ರತಿವರ್ಷ ಬರುವ ಒಂದು ಲಕ್ಷ ಬಡ್ಡಿ ಹಣದಲ್ಲಿ ಗ್ರಾಮದ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ ಅವರ ಶಿಕ್ಷಣ–ಕ್ಕೆ ನೆರವು ನೀಡುತ್ತಿದ್ದಾರೆ. ಸಮಾಜಮುಖಿ ಸೇವೆ ಮೂಲಕ ಪ್ರತಿಷ್ಠಿತ ಬಿರಾದಾರ ಕುಟುಂಬ ನಮ್ಮ ಗ್ರಾಮದ ಹೆಮ್ಮೆಯ ಪ್ರತೀಕವಾಗಿದ್ದು, ಯುವಸಮೂಹಕ್ಕೆ ಹಾಗೂ ಇತರರಿಗೆ ಪ್ರೇರಣೆಯಾಗಿದೆ ಎಂದರು.




ಇದೇ ವೇಳೆ ಮಲಘಾಣ ಗ್ರಾಮದ ಪ್ರತಿಭಾನ್ವಿತ ದಂತ ವಿಜ್ಞಾನದ ವಿದ್ಯಾರ್ಥಿ ಅಭಿಷೇಕ ಸೀತಾರಾಮ ಚವ್ಹಾಣ ಇವರಿಗೆ 30,000, ಇಂಜಿನಿಯರಿಂಗ್ (ಕಂಪ್ಯೂಟ–ರ್ ಸೈನ್ಸ್) ವಿದ್ಯಾರ್ಥಿನಿ ರಕ್ಷಿತಾ ಅಖಂಡಪ್ಪ ಯರನಾಳ ಇವರಿಗೆ ರೂ. 25,000, ಬಿಸಿಎ ವಿದ್ಯಾರ್ಥಿ ಮದನ ಚಿದಾನಂದ ವಠಾರ ಇವರಿಗೆ ರೂ. 15,000, ಪಿಯುಸಿ ವಾಣಿಜ್ಯ ವಿದ್ಯಾರ್ಥಿನಿಯರಾದ ಸುಧಾ ಎಸ್. ಕೋಲ್ಹಾರ, ಅರ್ಚನಾ ಎಸ್. ಕಲ್ಯಾಣಿ ಮತ್ತು ಬಿಎ ವಿದ್ಯಾರ್ಥಿ ಮುದಕಪ್ಪ ಹಣಮಂತ ಮಾದರ ಇವರುಗಳಿಗೆ ತಲಾ ರೂ. 10,000 ಪ್ರೋತ್ಸಾಹ ಧನವನ್ನು ವೇದಿಕೆಯಲ್ಲಿ ಸಾನಿಧ್ಯವಿದ್ದ ಪರಮಪೂಜ್ಯರು ವಿತರಣೆ ಮಾಡಿ ಆಶೀರ್ವದಿಸಿದರು. ಬೃಹತ್ ಕೈಗಾ–




ರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಹಾಂತೇಶ ಬಿರಾದಾರ ಹಾಗೂ ಅವರ ಕುಟುಂಬಸ್ಥರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮನಗೂಳಿ ಹಿರೇಮಠದ ಅಭಿನವ ಸಂಗನಬಸವ ಶಿವಾಚಾರ್ಯರುದಿವ್ಯಸಾನಿಧ್ಯವಹಿಸಿದ್ದರು. ಇಂಗಳೇಶ್ವರ, ವಡವಡಗಿಯ ಬೃಂಗೀಶ್ವರ ಶಿವಾಚಾರ್ಯರು, ಶಾಂತಾನಂದ ಮಹಾಸ್ವಾಮಿಗಳು, ಸಂಗಮೇಶ್ವರ ಮಹಾಸ್ವಾಮಿಗಳು, ಜ್ಞಾನಮಯಾನಂದ ಮಹಾಸ್ವಾಮಿಗಳು, ಬಿದರಿಯ ಬಸಯ್ಯ ಸ್ವಾಮಿಗಳು, ನಾಗಲಿಂಗೇಶ್ವರ ಮಹಾರಾಜರ ಜ್ಞಾನಯೋಗಾಶ್ರಮದ ಸದಾನಂದ ಮಹಾರಾಜರು ಹಾಗೂ ವೇ. ವೀರಗಂಟಯ್ಯ ಹಿರೇಮಠ ಸಾನಿಧ್ಯವಿದ್ದರು.

ಮುಖಂಡ ಸದಾನಂದ ನಿಂಗನೂರ ಸ್ವಾಗತಿಸಿದರು. ಹನುಮಂತ ಕಾಖಂಡಕಿ ನಿರೂಪಿಸಿ, ವಂದಿಸಿದರು.

# ಆರೋಗ್ಯಪೂರ್ಣ ತಾಯಿ–ಮಗು ಸರಕಾರದ ಆದ್ಯತೆ : ಬಿರಾದಾರ




■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಸಮಾಜಕ್ಕೆ ಆರೋಗ್ಯಪೂರ್ಣ ತಾಯಿ , ಮಗುವನ್ನು ನೀಡುವ ನಿಟ್ಟಿನಲ್ಲಿ ಸರಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು ಅವುಗಳ ಸದುಪಯೋಗ ಪಡೆದುಕೊಂಡು ಆರೋಗ್ಯವಂತರಾಗಬೇಕೆಂದು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಶಿವಾನಂದ ಬಿರಾದರ ಹೇಳಿದರು.

ಗ್ರಾಮದ ಶ್ರೀ ಬನಶಂಕರಿದೇವಿ ಕಲ್ಯಾಣ ಮಂಟಪದಲ್ಲಿ ಗುರುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಆಡಳಿತ, ತಾಲುಕಾ ಪಂಚಾಯತ್, ಶಿಶು ಅಭಿವೃದ್ಧಿ ಯೋಜನಾ ಇಲಾಖೆಯ ಸಂಂ–ಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ಹಮ್ಮಿಕೊಂಡ "ಪೋಷಣ್ ಮಾಸಾಚರಣೆ" ಕಾರ್ಯಕ್ರಮದ ಉದ್ಘಾಟಣೆ ನೆರವೇರಿಸಿ ಮಾತನಾಡಿದ ಅವರು, ಈ ಹಿಂದೆ ಹೆರಿಗೆ ಸಮಯದಲ್ಲಿ ತಾಯಿ ಅಥ–ವಾ ಮಗು ಸಾವನ್ನಪ್ಪುವ ಪ್ರಕರಣ ಹೆಚ್ಚುತಿದ್ದವು ಈಗ ಮಹಿಳೆ ಗರ್ಭವತಿಯಾದಾಗಿನಿಂದ ಜನಿಸಿದ ಮಗು ಪ್ರೌಢಾವಸ್ತೆ ತಲುಪುವವರೆಗೂ ಸರಕಾರ ಪ್ರತೀ ಹಂತದಲ್ಲಿ ಮೊಟ್ಟೆ, ಹಾಲು ಸೇರಿದಂತೆ ಪೋಷಕಾಂಶಯುಕ್ತ ಆಹಾರ ನೀಡುತ್ತಿದೆ ಅಲ್ಲದೇ ಕಾಲಕಾಲಕ್ಕೆ ಪರೀಕ್ಷೆ ಮಾರ್ಗದರ್ಶನ ನೀಡುತಿದ್ದು ಇದರಿಂದ ಆಹಾರ ಕೊರತೆಯ ಮರಣ ಪ್ರಮಾಣ ಕಡಿಮೆಯಾಗಿದೆ ಎಂದರು.

ಶಿಕ್ಷಣ ಇಲಾಖೆಯ ಸಿಆರ್‌ಸಿ ಶ್ರೀಮತಿ ಗದ್ರಾಕ್ಷಾಯಿಣಿ ಮಂಡಿ ಮಾತನಾಡಿ ಗರ್ಭಿಣಿ ಹಾಗೂ ಮಗುವಿಗೆ ಸರಕಾರದಿಂದ ದೊರೆಯುವ ಸೌಲಭ್ಯಗಳನ್ನು ವಿವರಿಸಿದರು.

ಶಿಶು ಅಭಿವೃದ್ಧಿ ಇಲಾಖೆಯ ಹಿರಿಯ ಮೇಲ್ವಿಚಾರಕಿ ಶ್ರೀಮತಿ ಎಸ್.ಎಸ್ ಚೆನ್ನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಥಳಿಯ ಪ್ರಾಥ–ಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಶ್ರೀಮತಿ ಟಿ.ಎಸ್ ತಳ್ಳಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತಯನ್ನು ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಮಾಲಾ ಅಶೋಕ ಮೋಟಗಿ ವಹಿಸಿದ್ದರು. ಮುಖ್ಯ ಅಥಿತಿಗಳಾಗಿ ಉಪಾಧ್ಯಕ್ಷ ಶ್ರೀಮತಿ ಪ್ರೇಮಾ ಪರಪ್ಪಾ ಗೋವಿಂದಗೋಳ, ಗ್ರಾ.ಪಂ. ಸದಸ್ಯರಾದ ಪ್ರಕಾಶ ಪಾಟೀಲ, ಕೇಶವ ವಂದಾಲ, ಹಣಮಂತ ಬಜಂತ್ರಿ ಸೇರಿದಂತೆ ಹಲವು ಪ್ರಮುಖರು ಆಗಮಿಸಿದ್ದರು.

ಇದೇ ಸಂಧರ್ಬದಲ್ಲಿ ಹಲವು ಗರ್ಭಿಣಿ ಮಹಿಳೆಯರ ಸೀಮಂತ ಕಾರ್ಯಕ್ರಮ ಅನ್ನ ಪ್ರಾಶನ ಹಾಗೂ ಜನ್ಮದಿನ ಆಚರಣೆ ಕಾರ್ಯಕ್ರಮ ನಡೆಸಲಾಯಿತು.

ಕಾರ್ಯಕ್ರಮಕ್ಕೆ ಎಲ್. ಆರ್. ಕೋರಿಶೆಟ್ಟಿ ಸ್ವಾಗತಿಸಿದರು, ಪ್ರಭಾವತಿ ಸಗರಿ ನಿರೂಪಿಸಿದರು, ಎ.ಎಸ್. ಕರಿಗಾರ ವಂದಿಸಿದರು.



# ಭಾರತ ಕಂಡ ಶ್ರೇಷ್ಠ ಇಂಜಿನಿಯರ್ ವಿಶ್ವೇಶ್ವರಯ್ಯ

ಬಳ್ಳಾರಿ, : ನೀರು ಮತ್ತು ನೀರಾವರಿ ಮಹತ್ವ ಅರಿತು ಅದರ ಸಂಗ್ರಹಣೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಅಣೆಕಟ್ಟು ನಿರ್ಮಾಣ ಕಾರ್ಯದಲ್ಲಿ ತೊಡಗಿದ ಶ್ರೇಷ್ಠ ಅಭಿಯಂತರ ಭಾರತ ರತ್ನ ಸರ್. ಎಂ.ವಿಶ್ವೇಶ್ವರಯ್ಯನವರೆಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.

ತಾಲೂಕಿನ ಸಂಜೀವರಾಯನಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸರ್.ಎಂ.ವಿ.ಅವರ 164ನೇ ಜಯಂತ್ಯೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ಅಭಿಯಂತರ ದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪುಷ್ಪ ನಮನಸಲ್ಲಿಸಿ ಮಾತು ಮುಂದುವರಿಸಿದ ಅವರು ಕೃಷ್ಣರಾಜ ಸಾಗರ ಅಣೆಕಟ್ಟು, ತುಂಗಭದ್ರಾ ಅಣೆಕಟ್ಟು, ಹೈದರಾಬಾದಿನ ಮೂಸಿ ಅಣೆಕಟ್ಟು ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದವರು.

ಕನ್ನಡ ಸಾಹಿತ್ಯ ಪರಿಷತ್ತು, ಸ್ಟೇಟ್ ಬ್ಯಾಂಕ್ ಮೈಸೂರು, ಭದ್ರಾವತಿಯ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ ಇವರು ಮೈಸೂರಿನ ದಿವಾನರಾಗಿದ್ದ ಸಂದರ್ಭದಲ್ಲಿ ನಿರ್ಮಾಣಗೊಂಡಿವೆ.

ಇವರು ದೇಶದಲ್ಲಿ ಮಾತ್ರವಲ್ಲ ವಿದೇಶಗಳಲ್ಲಿ ಕೂಡ ಮಹತ್ವದ ಸೇವೆ ಸಲ್ಲಿಸಿ ಪ್ರಶಂಸೆ ಹಾಗೂ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

ಆದ್ದರಿಂದ ವಿದ್ಯಾರ್ಥಿಗಳು ಶತಾಯುಷಿ ಸರ್. ಎಂ.ವಿ.ಅವರ ಜೀವನ ಸಾಧನೆಗಳನ್ನು ಅರಿತು ಅವರಂತೆ ಮೇಧಾವಿಗಳಾಗಬೇಕೆಂದು ಹಾರೈಸಿದರು.

ನಲಿಕಲಿ ಶಿಕ್ಷಕಿ ಕೆ.ಸುಮತಿ ಜ್ಯೋತಿ ಬೆಳಗಿಸಿ ಚಾಲನೆ ನೀಡಿ ಮಾತನಾಡಿದ ಅವರು ವಿದ್ಯಾರ್ಥಿಗಳು ಎಂ.ವಿ.ಅವರಂತೆ ಪ್ರತಿಭಾವಂತರಾಗಬೇಕೆಂದು ಹೇಳಿದರು.

ಶಿಕ್ಷಕರಾದ ಶ್ವೇತಾ, ಉಮ್ಮೆಹಾನಿ, ಶಶಮ್ಮ, ರಾಮಾಂಜನೇಯ ಹಾಗೂ ವಿದ್ಯಾರ್ಥಿ ಪ್ರತಿನಿಧಿ ಕೆ. ಎಸ್. ಅನುಷ ಮುಂತಾದವರು ಉಪಸ್ಥಿತರಿದ್ದರು.

# ಕೊಟ್ಟೂರುಸ್ವಾಮಿ ಮಠದಲ್ಲಿ ಹಾನಗಲ್ಲಕುಮಾರೇಶ್ವರರ ಜೀವನ ದರ್ಶನ ಪುರಾಣ ಆರಂಭ



ಬಳ್ಳಾರಿ; ನಗರದ ಕೊಟ್ಟೂರು ಸ್ವಾಮಿ ಮಠದಲ್ಲಿ ನಿನ್ನೆಯಿಂದ 10 ದಿನಗಳ ಕಾಲ ಹಮ್ಮಿಕೊಂಡಿರುವ ಹಾನಗಲ್ಲಿನ ಕುಮಾರ ಶಿವಯೋಗಿಗಳ ಜೀವನ ದರ್ಶನದ ಪ್ರವಚನವನ್ನು ಹಮ್ಮಿಕೊಂಡಿದೆ.

ಮಠದ ಶ್ರೀಗಳಾದ ಬಸವಲಿಂಗ ಶ್ರೀಗಳ ಸಾನಿಧ್ಯದಲ್ಲಿಪ್ರತಿದಿನ ಸಂಜೆ 7 ರಿಂದ 8.30 ರವರೆಗೆ ಹಾನಗಲ್ ಕುಮಾರ ಶಿವಯೋಗಿಗಳ 157 ಜಯಂತ್ಯೋತ್ಸವ ಹಾಗೂ ಜಗದ್ಗುರು ಡಾ. ಸಂಗನಬಸವ ಮಹಾಸ್ವಾಮಿಗಳ 86ನೇ ಜಯಂತೋತ್ಸವದ ಅಂಗವಾಗಿ ಈ ಪ್ರವಚನ(ಪುರಾಣ) ನಡೆಯುತ್ತಿದೆ.

ಹತ್ತು ದಿನಗಳ ಕಾರ್ಯಕ್ರಮಕ್ಕೆ ಮಠದಶ್ರೀಗಳು ದೀಪ ಬೆಳಗಿಸಿ ಚಾಲನೆ ನೀಡಿದರು.ಕುರುಗೋಡಿನ ನಿರಂಜನ ಪ್ರಭುಶ್ರೀಗಳು, ಬೂದುಗುಂಪದ ಶ್ರೀಗಳು, ಸೋಮಸಮುದ್ರ ಸಿದ್ದಲಿಂಗ ಶ್ರೀಗಳು, ಮಸೀದಿಪುರದ ಸಿದ್ರಾಮನಗೌಡ, ಪತ್ರಕರ್ತ ಎನ್.ವೀರಭದ್ರಗೌಡ ಭಾಗವಹಿಸಿದ್ದರು.

ಡೋಣಿಯ ಶಶಿಧರ ಶಾಸ್ತ್ರಿಗಳು ಪ್ರವಚನ ನೀಡುತ್ತಿದ್ದು. ಸಂಗೀತಗಾರರಾಗಿ ಡಿ.ಕಗ್ಗಲ್ಲಿನ ದೊಡ್ಡ ಬಸವ ಗವಾಯಿ, ತಬಲ ವಾದಕರಾಗಿ ತೋಟೇಂದ್ರ ಕರಡಕಲ್ ಅವರು ಪುರಾಣ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರವಚನ ನೀಡಿದ ಶಶಿಧರ ಶ್ರೀಗಳು ಭಕ್ತಿ, ಕಾಯಕದ ಮಹತ್ವ ತಿಳಿಸಿದರು.

ನಂತರ ಮಠದ ಶ್ರೀಗಳಾದ ಬಸವಲಿಂಗ ಶ್ರೀಗಳು, ಇಂದಿನ ಯಾಂತ್ರಿಕ ಬದುಕಿನಲ್ಲಿ ಜನತೆ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾರೆ.

ಇಂತಹ ಸಮಯದಲ್ಲಿ ಜನತೆ, ಭಕ್ತ ಸಮೂಹ ಪುರಾಣ ಪ್ರವಚನಗಳಲ್ಲಿ ಭಾಗವಹಿಸಿ ಯಾಂತ್ರಿಕ ಬದುಕಿನಿಂದ ದೂರವಾಗಿ ಶಾಂತಿ ನೆಮ್ಮದಿ ಪಡೆಯಲು ಮುಂದಾಗಿ. ಜೊತೆಗೆ ಬದುಕಿನಲ್ಲಿ ಮತ್ತೊಬ್ಬರಿಗೆ ಸಹಾಯ ಮಾಡುವ ಗುಣ ಬೆಳಸಿಕೊಳ್ಳಬೇಕು. ದುಡಿಮೆಯಲ್ಲಿ ಹಂಚಿಕೊಂಡು ತಿನ್ನುವ ಕೆಲಸ ನಮ್ಮದಾಗಬೇಕು ಎಂದು ಹೇಳಿದರು.

ಪುರಾಣಕ್ಕೆ ಆಗಮಿಸುವ ಭಕ್ತರಿಗೆ ಇಲ್ಲಿನ ಬಸವೇಶ್ವರನಗರ, ತಾಲೂಕಿನ ಶ್ರೀಧರಗಡ್ಡೆ ಮತ್ತು ಸೋಮಸಮುದ್ರ ಗ್ರಾಮದಿಂದ ಬಸ್ ವ್ಯವಸ್ಥೆ ಕಲ್ಪಿಸಿದೆ ಜೊತೆಗೆ ಪುರಾಣದ ನಂತರ ಪ್ರಸಾದದ ವ್ಯವಸ್ಥೆ ಸಹ ಮಾಡಲಾಗಿದೆ.

## ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2024–25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣ ತರಬೇತಿ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಕಾನೂನು ಪದವೀಧರರು ಸೆಪ್ಟೆಂಬರ್ 30ರ ಒಳಗಾಗಿ , ತಿ.ಇಚಿಡಿ.ಟುಇ.ಎಟಿ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಅರ್ಜಿ ನಮೂನೆ ಹಾಗೂ ಅಗತ್ಯ ದೃಡೀಕೃತ ದಾಖಲೆಗಳ ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು, ಸಹಾಯಕ ನಿರ್ದೇಶಕರ ಕಚೇ–ರಿಗಳಿಗೆ ಸಲ್ಲಿಸತಕ್ಕದ್ದು, ಹೆಚ್ಚಿನ ಮಾಹಿತಿಗಾಗಿ ವಿಜಯಪುರದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

## ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೆಪಿಟಿಸಿಎಲ್ ವತಿಯಿಂದ 2ನೇ ತ್ರೈಮಾಸಿಕ ನಿರ್ವಹಣ ಕಾರ್ಯ ಕೈಗೊಳ್ಳುವ ಹಿನ್ನೆಲೆಯಲ್ಲಿ ಸೆಪ್ಟೆಂಬರ್ 22ರಂದುದು 110/11ಕೆವಿ ವಿದ್ಯುತ್ ವಿತರಣ ಕೇಂದ್ರ ಭೂತನಾಳ ಹಾಗೂ ಸೆಪ್ಟೆಂಬರ್ 24ರಂದು 110/11 ಕೆವಿ ವಿದ್ಯುತ್ ವಿತರಣ ಕೇಂದ್ರ ಕೆಐಎಡಿಬಿ, ಜುಮನಾಳ, ವಿಜಯಪುರ ಸಿಟಿ, ಮತ್ತು 220/110 ಕೆವಿ ಸ್ವೀಕರಣಾ ಕೇಂದ್ರದಿಂದ ಹೊರಹೋಗುವ ಎಲ್ಲಾ 11ಕೆವಿ ವಿದ್ಯುತ್ ಮಾರ್ಗಗಳಿಗೆ ಸದರಿ ದಿನದಂದು ಬೆಳಿಗ್ಗೆ 9ರಿಂದ 3 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಆದ–ರಿಂದ ಗ್ರಾಹಕರು ಸಹಕ–ರಿಸಬೇಕು ಎಂದು ವಿಜಯಪುರ ಹೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರ ಜಿಲ್ಲಾ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಅವರು ಸೆ.23 ರಿಂದ 24 ರವರೆಗೆ ಜಿಲ್ಲಾ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಸೆ.23ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕರ್ನಾಟಕ ಸಂಭ್ರಮ–50 ರ ಆಚರಣೆಗೆ ಸಂಬಂಧಿಸಿದಂತೆ ಚರ್ಚೆ ನಡೆಸುವರು.

ಮಧ್ಯಾಹ್ನ 1.30ಕ್ಕೆ ವಿಜಯಪುರದಿಂದ ಹೊರಟು, ಸಂಜೆ 4ಗಂಟೆಗೆ ಮಹಾರಾಷ್ಟ್ರದ ಜತ್ತ ತಾಲೂಕಿನ ಗುಡ್ಡಾಪೂರದಲ್ಲಿ ವಿಜಯಪುರದ ಅಪರ ಜಿಲ್ಲಾಧಿಕಾರಿಗಳು, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಇತರೆ ಅಧಿಕಾರಿಗಳೊಂದಿಗೆ ಶ್ರೀದಾನಮ್ಮ ದೇವಿ ದೇವಸ್ಥಾನದ ಸಭಾಂಗಣದಲ್ಲಿ ಸೆ.30ರಂದು ನಡೆಯುವ ಕರ್ನಾಟಕ ಸಂಭ್ರಮ–50ರ ಆಚರಣೆಗೆ ಸಂಬಂಧಿಸಿದಂತೆ ವೇದಿಕೆ ಮತ್ತು ಇತರ ವ್ಯವಸ್ಥೆಗಳ ಕುರಿತು ಸ್ಥಳ ಪರಿಶೀಲನೆ ಮತ್ತು ಪ್ರಮುಖ ಸಂಘ ಸಂಸ್ಥೆಗಳೊಂದಿಗೆ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಂಜೆ 7.30ಕ್ಕೆ ಗುಡ್ಡಾಪೂರದಿಂದ ಹೊರಟು, ವಿಜಯಪುರಕ್ಕೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ. ಸೆ24 ರಂದು ಬೆಳಿಗ್ಗೆ 11ಗಂಟೆಗೆ ವಿಜಯಪುರದಿಂದ ಬೆಂಗಳೂರಿಗೆ ತೆರಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಸೆ.22ರಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಚೇರಿ ಉದ್ಘಾಟನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸೆಪ್ಟೆಂಬರ್ 22ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತಿಯ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನೂತನ ಕಚೇರಿ ಉದ್ಘಾಟನೆ ಸಮಾರಂಭ ನಡೆಯಲಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ ಪಾಟೀಲ ಅವರು ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ, ಕರ್ನಾಟಕ ಸರ್ಕಾರದ ನವದೆಹಲಿಯ ವಿಶೇಷ ಪ್ರತಿನಿಧಿ ಹಾಗೂ ವಿಧಾನ ಪರಿಷತ್ತಿನ ಶಾಸಕರಾದ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಅಪ್ಪಾಜಿ ಸಿ.ಎಸ್.ನಾಡಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಚ್. ಎಂ. ರೇವಣ್ಣ, ಸಂಸದರಾದ ರಮೇಶ ಜಿಗಜಿಣಗಿ, ಶ್ರೀಮತಿ ಸುಧಾ ಮೂರ್ತಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್. ಪಾಟೀಲ(ಬ್ಯಾಡಗಿ), ಶಾಸಕರಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರಿ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಕಾಂತಾ ನಾಯ್ಕ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ, ಮಹಾನಗರ ಪಾಲಿಕೆಯ ಮೇಯರ್ ಮಹೇಜಬಿನ ಹೊರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನಾನ್ ಮುಶ್ರೀಫ್ ಸೇರಿದಂತೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಸೇರಿದಂತೆ ಅಧಿಕಾ–ರಿಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಹೆಣ್ಣು ಮಗುವನ್ನು ಓದಿಸಿ ಲಿಂಗ ತಾರತಮ್ಯ ತೊಲಗಿಸಿ : ಪ್ರಮೀಳಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಹೆಣ್ಣು ಮಗುವನ್ನು ಸಂರಕ್ಷಿಸಿ, ಸುಶಿಕ್ಷಿತರನ್ನಾಗಿ ಮಾಡಿದರೆ ಲಿಂಗಾಧಾರಿತ ತಾರತಮ್ಯ ಹೋಗಲಾಡಿಸಲು ಸಾಧ್ಯ ಎಂದು ಅಂಗನವಾಡಿ ಕೇಂದ್ರದ ಹಿರಿಯ ಮೇಲ್ವಿಚಾರಕಿ ಪ್ರಮೀಳಾ ಕುಂದಗೋಳ ಹೇಳಿದರು.

ಅವರು ಶನಿವಾರದಂದು ತಾಲೂಕಿನ ನಾಗಠಾಣ ಗ್ರಾಮದ ಅಂಗನವಾಡಿ ಕೇಂದ್ರ–5 ರಲ್ಲಿ ಗ್ರಾಮ ಪಂಚಾಯಿತಿ, ಆರೋಗ್ಯ–ಶಿಕ್ಷಣ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ವಿಜಯಪುರ ಇವರ ಸಹಯೋಗದಲ್ಲಿ ಪಾಲಕರ ಸಭೆ,ಪೋಷಣ್ ಮಾಸಾಚಾರಣೆ, 'ಹೆಣ್ಣು ಮಗುವನ್ನು ರಕ್ಷಿಸಿ, ಹೆಣ್ಣು ಮಗುವನ್ನು ಓದಿಸಿ' ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದರು.

ಹೆಣ್ಣು ಮಕ್ಕಳನ್ನು ಸಬಲೀಕರಣ ಮಾಡುವದೇ ಬೇಟಿ ಬಚಾವೊ,ಬೇಟಿ ಪಡಾವೋ ಯೋಜನೆ ಉದ್ದೇಶವಾಗಿದೆ ಎಂದು ಹೇಳಿದರು.

ಹಿರಿಯ ಮೇಲ್ವಿಚಾರಕಿ ಪವಿತ್ರಾ ಪತ್ತಾರ ಮಾತನಾಡಿ, ಗರ್ಭಿಣಿಯರು, ಶಿಶುವಿನ ಬೆಳವಣಿಗೆ ಕುಂಠಿತ, ತೂಕ ಕೊರತೆ, ರಕ್ತಹೀನತೆ, ಕಡಿಮೆ ತೂಕದ ಶಿಶು ಸೇರಿದಂತೆ ಅಪೌಷ್ಟಿಕತೆ ಸಮಸ್ಯೆಯಿಂದ ಬಳಲುತ್ತಿರುವವರನ್ನು ಹೊರಕ್ಕೆ ತರಲು ಪೋಷಣ ಅಭಿಯಾನ ಪರಿಣಾಮಕಾರಿಯಾಗಿದೆ ಎಂದು ಹೇಳಿದರು.

ಶಿಕ್ಷಕ ಸಂತೋಷ ಬಂಡೆ ಸಸಿಗೆ ನೀರುಣಿಸಿ ಮಾತನಾಡಿ, ಗಂಡು, ಹೆಣ್ಣಿನ ಅನುಪಾತ ಅವಲೋಕಿಸಿ ನಾವು ಎಚ್ಚೆತ್ತುಕೊಳ್ಳಬೇಕಿದೆ. ತನಗೆ ಗಂಡು ಮಗು ಬೇಕು ಎಂಬ ಆಸೆ ಬಿಟ್ಟು, ಮನೆಯಲ್ಲಿ ಹೆಣ್ಣು–ಗಂಡು ಮಕ್ಕಳನ್ನು ಸಮಾನವಾಗಿ ನೋಡುವ ಮನೋಭಾವ ಎಲ್ಲರೂ ಬೆಳೆಸಿಕೊಳ್ಳಬೇಕು.

ಹೆಣ್ಣು ಮಗುವಿಗೆ ಉನ್ನತ ಶಿಕ್ಷಣ ನೀಡುವ ಅವಶ್ಯಕತೆ ಇದೆ ಎಂದು ಹೇಳಿದರು.


ಮೇಲ್ವಿಚಾರಕಿ ಜ್ಯೋತಿ ಕುಲಕರ್ಣಿ ಮಾತನಾಡಿ, ಹೆಣ್ಣು ಮಗುವಿನ ಹುಟ್ಟು ಹಬ್ಬ, ಹೆಣ್ಣು ಮಗುವಿನ ಹೆಸ–ರಿನಲ್ಲಿ ಗಿಡ ನೆಡುವುದು, ಅನ್ನ ಪ್ರಾಶನ, ಸೀಮಂತ ಕಾರ್ಯ ಮಾಡಿ, ಪಾಲಕರಿಗೆ ಈ ಬಗ್ಗೆ ತಿಳುವಳಿಕೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆ ಸುಶೀಲಾ ಕೆರೂರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಂಗನವಾಡಿ ಕಾರ್ಯಕರ್ತೆಯರಾದ ವಿಜಯಲಕ್ಷ್ಮೀ ಹಂಡಿ, ಸಂಧ್ಯಾ ಜಹಾಗೀರದಾರ ಹಾಗೂ ಸಹಾಯಕಿಂ–ಯರಾದ ರಾಜಶ್ರೀ ಸಮಗೊಂಡ, ರಾಜಶ್ರೀ ಮಕಣಿ ಸೇರಿದಂತೆ ಅನೇಕ ತಾಯಂದಿರು, ಪಾಲಕರು ಭಾಗವಹಿಸಿದ್ದರು.

## ಮಕ್ಕಳ ಪ್ರತಿಭೆ ಹೊರಹೊಮ್ಮಿದರೆ ಸಾಧನೆ ಸಾಧ್ಯ : ಇಸಿಓ ಹುಣಸಿಗಿ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ಕೊಡುವ ಉದ್ದೇಶದಿಂದ ಪ್ರತಿ ವರ್ಷ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿಭಾ ಕಾರಂಜಿ ಸುಮಾರು 15 ವರ್ಷಗಳದಿಂದ ಕಾರ್ಯಕ್ರಮ ಆಯೋಜಿಸುತ್ತಾ ಮಕ್ಕಳ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಲಾಗುತ್ತದೆ. ಇದರಲ್ಲಿ ಮಕ್ಕಳ ಪ್ರತಿಭೆ ಹೊರಹೊಮ್ಮಿದರೆ ಸಾಧನೆ ಸಾಧ್ಯವಾಗುತ್ತದೆ ಎಂದು ಕ್ಷೇತ್ರ ಶಿಕ್ಷಣ ಇಲಾಖೆ ಇಸಿಓ ಆನಂದ ಹುಣಸಿಗಿ ಹೇಳಿದರು.

ತಾಲ್ಲೂಕಿನ ತಡವಲಗಾ ಗ್ರಾಮದ ಶ್ರೀ ಮರುಳಸಿದ್ದೇಶ್ವರ ಪ್ರೌಢ ಶಾಲೆಯ ಆವರಣದಲ್ಲಿ ನಮ್ಮ ಹಿರಿಯ ಪ್ರಾಥಮಿಕ ಶಾಲೆಯ ಸಹಯೋಗದಲ್ಲಿ ನಡೆದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಮುಗ್ಧ ಮನಸುಗಳ ಪ್ರತಿಭೆ ಅನಾವರಣವೇ ಪ್ರತಿಭಾ ಕಾರಂಜಿ ಶಿಕ್ಷಣ ಇಲಾಖೆ 1ರಿಂದ 12 ತರಗತಿ ವಿದ್ಯಾರ್ಥಿಗಳಿಗೆ ಜನಪದ ನೃತ್ಯ, ಧಾರ್ಮಿಕ ಪಠಣ, ಜಾನಪದ ಗೀತೆ, ಭಾವಗೀತೆ, ಭಕ್ತಿಗೀತೆ, ಭಾಷಾ ಕಂಠಪಾಠ, ಭರತನಾಟ್ಯ, ಚಿತ್ರಕಲೆ, ರಂಗೋಲಿ ಸ್ಪರ್ಧೆ, ಆಶುಭಾಷಣ, ಮಿಮಿಕ್ರಿ, ಕ್ವಿಜ್ ಹಾಗೂ ಕವಾಲಿ ಮೂಲಕ ಮುಗ್ಧ ಮನಸುಗಳ ಪ್ರತಿಭೆಯನ್ನು ಕ್ಲಸ್ಟರ್ ಹಂತದಲ್ಲಿ ಗುರುತಿಸಿ ಪ್ರೋತ್ಸಾಹಿಸುವಂತ ಕಾರ್ಯ ಮಹತ್ವದ ಕಾರ್ಯನಡೆಯುತ್ತಿದೆ. ಈ ಕಾರ್ಯಕ್ರಮ ಯಶಸ್ವಿಯಲ್ಲಿ ಶಿಕ್ಷಕರ ಪಾತ್ರ ಬಹಳ ಮುಖ್ಯವಾಗಿರುತ್ತದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಂತು ಇಂಡಿ, ಮಕ್ಕಳಿಗೆ ಪ್ರತಿಭಾ ಕಾರಂಜಿ ಕನ್ನಡ ಸಂಸ್ಕೃತಿ ನಾಡಿನ ಪರಂಪರೆ ಹಾಗೂ ಮಕ್ಕಳಲ್ಲಿ ಸ್ಪರ್ಧಾತ್ಮಕ ಬೆಳವಣಿಗೆಗೆ ಸಹಾಯಕವಾಗಿದೆ. ಮಕ್ಕಳ ಸಾಂಸ್ಕೃತಿಕ ಎಂದು ಹೇಳಿದರು.

ಇದೆ ಸಂದರ್ಭದಲ್ಲಿ ಶಿಕ್ಷಕ ರಮೇಶ ಮುಂಜಣ್ಣಿ ನಮ್ಮ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ನಿಂಗಪ್ಪ ತಳವಾರ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ಗ್ರಾಪಂ ಅಧ್ಯಕ್ಷೆ ಸುನಂದಾ ವಾಲಿಕಾರ, ಸಿಆರ್‌ಪಿ ಪ್ರಕಾಶ್ ರಾಥೋಡ್, ಎಸ್ ಜಿ ನಾರಾಯಣಕರ್, ಎಂ ಜಿ ರೊಳ್ಳಿ, ಅನಿತಾ ರಾಥೋಡ್, ಎಸ್ ಸಿ.ಗಿಡಗಂಟಿ,ಆನಂದ ಮೊರೆ, ಎಸ್ ಕೆ ಲಾಳಸಂಗಿ ವಿವಿಧ ಶಾಲೆ ಮುಖ್ಯ ಗುರು ಹಾಗೂ ಶಿಕ್ಷಕ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಎನ್.ಎ.ತಳವಾರ ಸ್ವಾಗತಿಸಿದರು. ಶಿಕ್ಷಕ ಪಿ ಸಿ ಬಗಲಿ ನಿರೂಪಿಸಿದರೆ, ಎನ್.ಸಿ.ಕುಂಬಾರ ವಂದಿಸಿದರು.

## ಸಹಕಾರಿ ಸಂಘಗಳು ರೈತ ಸಮುದಾಯಕ್ಕೆ ಆಧಾರಸ್ತಂಭ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಗ್ರಾಮೀಣ ಪ್ರದೇಶದ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಸಹಕಾರಿ ಸಂಘಗಳು ರೈತ ಸಮುದಾಯಕ್ಕೆ ಆಧಾರಸ್ತಂಭವಾಗಿವೆ ಎಂದು ಮಹಾಂತೇಶ್ವರಮಠದ ಬಸವಲಿಂಗಶ್ರೀಗಳು ಹೇಳಿದರು.

ತಾಲ್ಲೂಕಿನ ಕೋರವಾರ ಗ್ರಾಮದಲ್ಲಿ ಶನಿವಾರ ಜರುಗಿದ ವಿ.ಪ್ರಾ.ಗ್ರಾ.ಕೃ.ಸ. ಸಂಘದ ವಾರ್ಷಿಕ ಸರ್ವ ಸಾಧಾರಣ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದರು. ಕೃಷಿ ಸಹಕಾರಿ ಸಂಘಗಳು ರೈತ ಸಮುದಾಯಕ್ಕೆ ಸೇರಿದ ಸಂಸ್ಥೆಗಳು. ಇವುಗಳ ಲಾಭ, ಹಾನಿ ಸೇರಿದಂತೆ ಪ್ರತಿಯೊಂದು ಚಟುವಟಿಕೆಗಳ ಬಗ್ಗೆ ಅರಿಯುವುದು ರೈತರ ಜವಾಬ್ದಾರಿಯಾಗಿದೆ ಎಂದರು.

ವಿ.ಪ್ರಾ.ಗ್ರಾ.ಕೃ.ಸ. ಸಂಘದ ಅಧ್ಯಕ್ಷ ಸಂಗಮೇಶ ಛಾಯಾಗೋಳ ಮಾತನಾಡಿ, ರೈತ ಸಮುದಾಯ ಸರ್ವಸಾಧಾರಣ ಸಭೆಗೆ ಕಡ್ಡಾಯವಾಗಿ ಹಾಜರಾಗುವುದರ ಮೂಲಕ ತಮ್ಮ ಇಚ್ಛಾಶಕ್ತಿಯನ್ನು ತೋರ್ಪಡಿಸಬೇಕು. ಸಂಘ ಸದಸ್ಯರ ಸಹಕಾರದಿಂದ ಈ ವರ್ಷ 13.50 ಲಕ್ಷ ಲಾಭಗಳಿಸಿದ್ದು ಪ್ರಗತಿಪಥ–'ವನ್ನು ಸೂಚಿಸುತ್ತದೆ. ಸಂಘ ಇದೇ ರೀತಿಯಾಗಿ ಉತ್ತರೋತ್ತರವಾಗಿ ಅಭಿವೃದ್ಧಿಯಾಗಲು ಎಲ್ಲರ ಸಹಕಾರವಿರಲಿ ಎಂದರು.

ಇದೇ ಸಂದರ್ಭದಲ್ಲಿ ಭೂದಾನ ಮಾಡಿದ ಖ್ಯಾತ ವೈದ್ಯ ಎಸ್.ಎ.ಹಿರೇಮಠ ಹಾಗೂ ಅತ್ಯುತ್ತಮ ಶಿಕ್ಷಕರು, ಪ್ರಗತಿಪರ ರೈತರು, ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಚೌಕಿಮಠದ ಕಾಶೀಲಿಂಗ ಶ್ರೀಗಳು, ಸಂಘದ ಉಪಾಧ್ಯಕ್ಷ ಶರಣಪ್ಪ ತಾಳಿಕೋಟಿ, ಸದಸ್ಯರಾದ ಎಸ್. ಎಸ್.ಪೊಲೀಸಪಾಟೀಲ, ನಾನಾಗೌಡ ಬೋರಾವತ, ಜಿ.ಎಮ್. ಅಂಗಡಿ, ಸಂತೋಷಗೌಡ ಪೊ.ಪಾಟೀಲ, ಶರಣಬಸು ಸುಂಬಡ, ಸೋಮಶೇಖರ ಹಿರೇಮಠ, ಬಾಬಾಸಾಹೇಬ ಕೋಟಗಿ, ಇಸ್ಮಾಯಿಲ್ ವಡಗೇರಿ, ಚಿದಾನಂದ ಚವ್ಹಾಣ, ಭೀಮರಾಯ ತಳವಾರ ಅನೀಲ ಸೋಲಂಕಾರ ಸೇರಿದಂತೆ ಕೋರವಾರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಇದ್ದರು.

## ಎಫ್‌ಕೆಸಿಸಿಐ ನಿರ್ದೇಶಕರಾಗಿ ರವೀಂದ್ರ ಕೋರೆ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಚಿಮ್ಮಡ: ರಾಜ್ಯದ ಪ್ರತಿಷ್ಠಿತ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ (ಎಫ್‌ಕೆಸಿಸಿಐ) ನಿರ್ದೇಶಕರಾಗಿ ಗ್ರಾಮದ ಸಿ.ಎ. ರವೀಂದ್ರ ಎಸ್. ಕೋರೆ ಸತತವಾಗಿ ನಾಲ್ಕನೇಯ ಬಾರಿಗೆ ಆಯ್ಕೆಯಾಗಿದ್ದು ಗ್ರಾಮಸ್ಥರು ಹರ್ಷ ವಕ್ತಪಡಿಸಿದ್ದಾರೆ.

ರವಿಂದ್ರ ಕೋರೆಯವರು ವಾಣಿಜ್ಯ ಮತ್ತು ಕಾನೂನು ಪದವಿಧರರಾಗಿದ್ದು, ತಮ್ಮ ಪ್ರಾಥಮಿಕ ಶಿಕ್ಷಣವನ್ನು ಚಿಮ್ಮಡ ಗ್ರಾಮದಲ್ಲಿಯೇ ಪೋರೈಸಿದ್ದು, ಪ್ರೌಢ ಹಾಗೂ ಪದವಿ ಶಿಕ್ಷಣವನ್ನು ಮಹಾಲಿಂಗಪುರದ ಎಸ್.ಸಿ.ಪಿ.(ಕೆಎಲ್‌ಇ) ಮಹಾವಿದ್ಯಾಲಯದಲ್ಲಿ ಪೋರೈಸಿದ್ದಾರೆ. ಇತ್ತೀಚೆಗೆ ನಡೆದ ಪ್ರತಿಷ್ಠಿತ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಚುನಾವಣೆಯಲ್ಲಿ ವೃತ್ತಿಪರ ಕ್ಷೇತ್ರದಿಂದ ನೂತನ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ಉತ್ತರ ಕರ್ನಾಟಕ ಭಾಗದಿಂದ ಪ್ರಪ್ರಥಮ ಬಾರಿಗೆ ವೃತ್ತಿಪರ ಕ್ಷೇತ್ರದಿಂದ ಆಯ್ಕೆಯಾಗಿರುವ ರವೀಂದ್ರ ಕೋರೆ ಪತ್ರಿಕೆಯೊಂದಿಗೆ ಮಾತನಾಡಿ ಕಳೆದ ಬಾರಿ ಹುಬ್ಬಳ್ಳಿಯಲ್ಲಿ ರಾಜ್ಯದ ಯುವ ಕೈಗಾರಿಕೋದ್ಯಮಿಗಳಿಗೆ ಪ್ರೋತ್ಸಾಹ ಮತ್ತು ತರಬೇತಿ ನೀಡುವ ಮೂಲಕ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಕಾರ್ಯಕ್ರಮಗಳನ್ನು ಸಂಸ್ಥೆಯ ಮೂಲಕ ಹಮ್ಮಿಕೊಂಡಿದ್ದು ಅದನ್ನು ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸುವ ಗುರಿಯನ್ನು ಹೊಂದಿದ್ದು ಶೀಘ್ರದಲ್ಲಿಯೇ ಇದರ ರೂಪುರೇಷೆ ತಯಾ–ರಿಸಲಾಗುವುದೆಂದರು.

ಗ್ರಾ. ಪಂ. ಅಧ್ಯಕ್ಷರು, ಸದಸ್ಯರು, ಅಭಿಮಾನಿಗಳು ಹಾಗೂ ಸ್ಥಳಿಯ ವಿರಕ್ತ ಮಠದ ಶ್ರೀ ಪ್ರಭು ಮಹಾಸ್ವಾಮಿಗಳು ಕೋರೆಯವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ಅ.2ರಂದು ಗಾಂಧೀಜಿ–ಶಾಸ್ತ್ರೀ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಡಳಿತದ ವತಿಯಿಂದ ಇದೇ ಅಕ್ಟೋಬರ್ 2ರಂದು ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರೀ ಅವರ ಜಯಂತಿ ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣವಾಗಿ ಅಚ್ಚುಕಟ್ಟಾಗಿ ಆಯೋಜಿಸಲು ನಿರ್ಧರಿಸಲಾಯಿತು.

ಶನಿವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರಿ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಸಾರ್ವಜನಿಕರಿಗೆ ಮಹಾತ್ಮ ಗಾಂಧೀಜಿಯವರ ಬದುಕು, ಆದರ್ಶ ಹಾಗೂ ಅವರ ಜೀವನ ಸಂದೇಶದ ಅರಿವು ಮೂಡಿಸುವ ನಿಟ್ಟಿನಲ್ಲಿ ಅಕ್ಟೋಬರ್ 1 ರಂದು ಬೆಳಗ್ಗೆ 6.30ಕ್ಕೆ ಸೈನಿಕ ಶಾಲೆಯ ಎದುರಿಗೆ ಇರುವ ಲಾಲ್ ಬಹದೂರ ಶಾಸ್ತ್ರಿ ಪುತ್ಥಳಿಯಿಂದ ಅಲ್ಲಾಪೂರ ಓಣಿಯವರೆಗೆ ಸೈಕಲ್ ಜಾಥಾ ಕಾರ್ಯಕ್ರಮ ಹಾಗೂ ಅಲ್ಲಾಪೂರ ಓಣಿ ಹಾಗೂ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ, ಅಕ್ಟೋಬರ್ 2ರಂದು ಬೆಳಿಗ್ಗೆ 6.30ಕ್ಕೆ ತೊರವಿಯಲ್ಲಿ ಸ್ವಚ್ಚತಾ ಹಾಗೂ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು. ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿ, ವಿವಿಧ ಸಂಘ ಸಂಸ್ಥೆಗಳು ಶ್ರಮದಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ತಿಳಿಸಿದರು.

ನಗರದ ಗಾಂಧಿ ಚೌಕದಲ್ಲಿರುವ ಗಾಂಧಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರೀ ಅವರ ಪುತ್ಥಳಿಗೆ ಮಾಲಾರ್ಪಣೆ, ಅಕ್ಟೋಬರ್ 2ರಂದು ಬೆಳಗ್ಗೆ 9.30ಕ್ಕೆ ನಗರದ ಜಿಲ್ಲಾ ಪಂಚಾಯತಿಯ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಈ ಮಹನೀಯರ ಜಯಂತಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಣಯಿಸಲಾಯಿತು. ವೇದಿಕೆ ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ, ಸರ್ವಧರ್ಮ ಪ್ರಾರ್ಥನೆ, ನಾಡಗೀತೆ, ಉಪನ್ಯಾಸ ಕಾರ್ಯಕ್ರಮ, ವಿವಿಧ ಶಾಲಾ ಮಕ್ಕಳಿಂದ ಛದ್ಮವೇಷ ಪ್ರದರ್ಶನ, ಗಾಂಧೀಜಿಯವರ ಪ್ರಿಯ ಹಾಡುಗಳ ಭಜನೆ ಕಾರ್ಯಕ್ರಮ ಆಯೋಜನೆ ಮಾಡಲು ನಿರ್ಧ–ರಿಸಲಾಯಿತು. ಗಾಂಧೀ ಜಯಂತಿ ಪ್ರಯುಕ್ತ ಜಿಲ್ಲೆಯಲ್ಲಿ ಮದ್ಯ ಹಾಗೂ ಮಾಂಸ ಮಾರಾಟ ನಿರ್ಬಧಿಸಿ ಕ್ರಮವಹಿಸುವುದಾಗಿ ಹಾಗೂ ಸೂಕ್ತ ಸುರಕ್ಷತೆ, ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು, ಜಿಲ್ಲೆಯ ಎಲ್ಲಾ ಶಾಲಾ, ಕಚೇರಿಗಳಲ್ಲಿ ಆಚರಣೆ ಮಾಡುವಂತೆಯೂ ಸೂಚಿಸಲಾಯಿತು.

ಈ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿ ಹಾಗೂ ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಅಚ್ಚುಕಟ್ಟಾಗಿ ಕಾರ್ಯಕ್ರಮ ನಡೆಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ–ರಿಗಳಾದ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕ ಸಿ.ಬಿ.ದೇವರಮನಿ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಭಜಂತ್ರಿ, ಹಿಂದುಳಿದ ವರ್ಗಗಳ ಇಲಾಖೆಯ ಉಪನಿರ್ದೇಶಕ ಈರಣ್ಣ ಆಶಾಪೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಹಾಗೂ ನಿಲೇಶ್ ಬೆನಾಳ, ಪೀಟರ್ ಅಲೆಕ್ಸಾಂಡರ್, ಫಯಾಜ್ ಕಲಾದಗಿ, ಅಡಿವೆಪ್ಪ ಸಾಲಗಲ್, ಬೀಮರಾಯ ಜಿಗಜಿಣಗಿ, ಸೋಮನಗೌಡ ಕಲ್ಲೂರ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾ–ರಿಗಳು ಉಪಸ್ಥಿತರಿದ್ದರು.

" ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಪ್ರೌಢಶಾಲೆ, ಪದವಿ ಪೂರ್ವ ಮತ್ತು ಪದವಿ–ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾದ "ಬಾಪೂಜಿ ಪ್ರಬಂಧ ಸ್ಪರ್ಧೆ"ಯಲ್ಲಿ ವಿವಿಧ ವಿಭಾಗಗಳಲ್ಲಿ ತಲಾ 3 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಮಹಾತ್ಮಾ ಗಾಂಧೀಜಿ ಜಯಂತಿ ಸಮಾರಂಭದಲ್ಲಿ ಬಹುಮಾನ ಮತ್ತು ಪ್ರಮಾಣಪತ್ರಗಳನ್ನು ಇಲಾಖೆಯಿಂದ ವಿತರಿಸಲು ಕ್ರಮವಹಿಸಿದೆ."

■ - ಅಮರೇಶ ದೊಡಮನಿ

ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

## ತೋರಿಕೆಗಾಗಿ, ಪ್ರಶಸ್ತಿಗಾಗಿ ಕಾಯಕ ಮಾಡದಿರಿ: ಬುರ್ಲಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಎಲೆ ಮ‌ರೆ ಯ ಕಾಯಿಯಂತೆ ಹಗಲಿರಳೆನ್ನದೇ ಕಾಯಕದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದೇ ಆದರೆ ಜನರು ಮೆಚ್ಚುವುರಲ್ಲದೇ ಗೌರವ ಸನ್ಮಾನಗಳು ಲಭಿಸುವುದುಂಟು. ತೋ–ರಿಕೆಗಾಗಿ ಅಥವಾ ಪ್ರಶಸ್ತಿಗಾಗಿ ಕಾಯಕ ಮಾಡದೇ ಮನಸ್ಸಿನ ತೃಪ್ತಿಗಾಗಿ ಕಾಯಕ ಮಾಡುವುದು ಲೇಸು ಎಂದು ಇತ್ತೀಚಿಗೆ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ವಿಜಯಪುರ ಜಿಲ್ಲಾ ಘಟಕದ ಕಚೇರಿಯಲ್ಲಿ ಆಯೋಜಿಸಿದ್ದ ಪ್ರಶಸ್ತಿ ಪುರಸ್ಕೃತರ ಸನ್ಮಾನ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ವಿಜಯಪುರ ಜಿಲ್ಲಾ ಘಟಕದ ಅಧ್ಯಕ್ಷರು, ರಾಜ್ಯ ಪ್ರಶಸ್ತಿ ಪುರಸ್ಕೃತರೂ ಆದ ಶ್ರೀ ಎಸ್. ವಿ. ಬುರ್ಲಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಬೆಂಗಳೂರು ಇವರು ನೀಡುವ "ರಾಜ್ಯ ಮಟ್ಟದ ಕಾಯಕ ರತ್ನ" ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಸರೋಜಾ ಕೌಲಾಪುರ ಹಾಗೂ ಶಾಲಾ ಶಿಕ್ಷಣ ಇಲಾಖೆ, ವಿಜಯಪುರ ಇವರು ಶಿಕ್ಷಕ ದಿನಾಚರಣೆಯಂದು ನೀಡುವ "ಜಿಲ್ಲಾ ಮಟ್ಟದ ಆದರ್ಶ ಶಿಕ್ಷಕ" ಪ್ರಶಸ್ತಿ ಪುರಸ್ಕೃತರಾದ ಶ್ರೀ ರಾಜಕುಮಾರ ವಿ.ಚವ್ಹಾಣ ಇವರನ್ನು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಜಿಲ್ಲಾ ಘಟಕ ವಿಜಯಪುರ ವತಿಯಿಂದ ಸನ್ಮಾನಿಸಲಾಯಿತು.

ಅಧ್ಯಕ್ಷರಾದ ಶ್ರೀ ಎಸ್. ವಿ. ಬುರ್ಲಿ, ಪ್ರಧಾನ ಕಾರ್ಯದರ್ಶಿ ಆರ್. ಆರ್.ಮಿಸಾಳೆ, ಕಾರ್ಯದರ್ಶಿ ಬಿ.ಆಯ್.ಪರಂಡಿ, ಉಪಾಧ್ಯಕ್ಷ ಬಿ.ಎ. ಆಸಂಗಿ, ರಾಜಕುಮಾರ ಅರಗೆ, ಖಜಾಂಚಿ ಶ್ರೀಮತಿ ಸುಮಾ ಚೌಧರಿ, ಸದಸ್ಯರಾದ ಶ್ರೀಮತಿ ಜ್ಯೋತಿ ದೇಸಾಯಿ, ಶ್ರೀಮತಿ ರೂಪಾ ಪಡನಾಡ, ಶ್ರೀಮತಿ ಜಯಶ್ರೀ ಬುರ್ಲಿ, ಶ್ರೀ ಎ. ವಿ.ಪಾಟೀಲ, ಮಹಾದೇವ ದೇವರ, ಬಸವರಾಜ ಚೌಧರಿ ಹಾಗೂ ಇತರರು ಉಪಸ್ಥಿತರಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR